ಸಂಪುಟ : 3 ಸಂಚಿಕೆ : 330 ಪುಟ : 4 ಬೆಲೆ : ರೂ. 4 ಮಂಗಳವಾರ, ಜನವರಿ, 31, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 3 Issue : 330 Pages : 4 Rate : 4 Rs Tuesday, January 31, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com

## ಕಾಶ್ಮೀರದಲ್ಲಿ ನಡೆಯಲು ಬಿಜೆಪಿ ನಾಯಕರಿಗೆ ಭಯ: ರಾಹುಲ್ ಸವಾಲು



ಶ್ರೀನಗರ: ಜಮ್ಮು ಮತ್ತು ಕಾಶ್ಮೀರದಲ್ಲಿ ಕಾನೂನು ಸುವ್ಯವಸ್ಥೆ ಸರಿ ಇದೆ ಎನ್ನುವುದಾದರೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಜಮ್ಮುವಿನಿಂದ ಶ್ರೀನಗರದ ಲಾಲ್ ಚೌಕ್ ವರೆಗೆ ಪಾದಯಾತ್ರೆ ಮಾಡಲಿ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಸೋಮವಾರ ಸವಾಲು ಹಾಕಿದ್ದಾರೆ.

ಇಂದು ಶ್ರೀನಗರದಲ್ಲಿ ನಡೆದ ಭಾರತ್ ಜೋಡೋ ಯಾತ್ರೆಯ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ರಾಹುಲ್ ಗಾಂಧಿ, ಕಾಶ್ಮೀರದ ಬೀದಿಗಳಲ್ಲಿ ನಡೆಯಲು ಯಾವುದೇ ಬಿಜೆಪಿ ನಾಯಕರಿಗೂ ಸಾಧ್ಯವಿಲ್ಲ. ಏಕೆಂದರೆ ಅವರಿಗೆ ಭಯ ಇದೆ ಎಂದಿದ್ದಾರೆ.

ಕೇಂದ್ರಾಡಳಿತ ಪ್ರದೇಶದಲ್ಲಿ ಪರಿಸ್ಥಿತಿ ಉತ್ತಮವಾಗಿದ್ದರೆ ಅಮಿತ್ ಶಾ ಮತ್ತು ಇತರ ಬಿಜೆಪಿ ನಾಯಕರ ಜಮ್ಮುವಿನಿಂದ ಲಾಲ್ ಚೌಕ್‌ವರೆಗೆ ಪಾದಯಾತ್ರೆ ಕೈಗೊಳ್ಳಲಿ ಎಂದು ರಾಹುಲ್ ಗಾಂಧಿ ಸವಾಲು ಹಾಕಿದರು.

"ಜಮ್ಮು ಮತ್ತು ಕಾಶ್ಮೀರದಲ್ಲಿ ಉದ್ದೇಶಿತ ಹತ್ಯೆಗಳು ಮತ್ತು ಬಾಂಬ್ ಸ್ಫೋಟಗಳು ನಡೆಯುತ್ತಿವೆ. ಜನ ನಿತ್ಯವೂ ಭಯದಲ್ಲಿ ಜೀವನ ಮಾಡುತ್ತಿದ್ದಾರೆ. ಕಾನೂನು ಸುವ್ಯವಸ್ಥೆ ಸರಿ ಇಲ್ಲ. ನಮ್ಮ ಯಾತ್ರೆಗೆ ಸೂಕ್ತ ಭದ್ರತೆ ನೀಡಲಿಲ್ಲ ಎಂದು ನಾವು ಹೇಳಿದರೆ, ಬಿಜೆಪಿಯವರು ಆಧಾರರಹಿತ ಆರೋಪ ಎನ್ನುತ್ತಾರೆ. ಆದರೆ ಕಣಿವೆಯಲ್ಲಿ ಒಬ್ಬ ಬಿಜೆಪಿ ನಾಯಕನೂ ಸಾರ್ವಜನಿಕವಾಗಿ ಕಾಣಿಸಿಕೊಳ್ಳುವುದಿಲ್ಲ ಏಕೆ ಎಂದು ಪ್ರಶ್ನಿಸಿದರು.

"ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ ಮತ್ತು ಆರ್‌ಎಸ್‌ಎಸ್ ಇಲ್ಲಿನ ಹಿಂಸಾಚಾರವನ್ನು ನೋಡಿಲ್ಲ. ನಾವು ಕಳೆದ ನಾಲ್ಕು ದಿನಗಳಿಂದ ಇಲ್ಲಿ ನಡೆದಿದ್ದೇವೆ. ಯಾವುದೇ ಬಿಜೆಪಿ ನಾಯಕ ಇಲ್ಲಿ ಈ ರೀತಿ ನಡೆಯಲು ಸಾಧ್ಯವಿಲ್ಲ ಎಂದು ನಾನು ನಿಮಗೆ ಖಾತರಿ ನೀಡುತ್ತೇನೆ. ಏಕೆಂದರೆ ಭಯ ಇದೆ ಎಂದು ರಾಹುಲ್ ಗಾಂಧಿ ವಾಗ್ದಾಳಿ ನಡೆಸಿದರು.

## ಡಿ.ಕೆ.ಶಿವಕುಮಾರ್ ವಿರುದ್ಧ ಆಡಿಯೋ ಬಿಡುಗಡೆ ಮಾಡಿದ ರಮೇಶ್ ಜಾರಕಿಹೊಳಿ



ಬೆಳಗಾವಿ: ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ವಿರುದ್ಧ ಅಕ್ರಮ ಸಂಪತ್ತಿನ ಆರೋಪ ಮಾಡಿದ್ದ ಮಾಜಿ ಸಚಿವ ರಮೇಶ್ ಜಾರಕಿಹೊಳಿ, ಆಡಿಯೋ ಒಂದನ್ನು ಬಿಡುಗಡೆ ಮಾಡಿದ್ದಾರೆ.

ಬೆಳಗಾವಿಯಲ್ಲಿ ಬೆಳಿಗ್ಗೆ ಸುದ್ದಿಗೋಷ್ಠಿ ನಡೆಸಿದ್ದ ರಮೇಶ್ ಜಾರಕಿಹೊಳಿ ಡಿ.ಕೆ.ಶಿವಕುಮಾರ್ ವಿರುದ್ಧ ಗಂಭೀರ ಆರೋಪ ಮಾಡಿದ್ದರು. ಅವರ ವಿರುದ್ಧ 20 ಸಿಡಿ, ಆಡಿಯೋಗಳಿವೆ ಆದರೆ ಅದನ್ನು ಈಗ ಬಿಡುಗಡೆ ಮಾಡಲ್ಲ, ಸಿಬಿಐಗೆ ಕೊಡುತ್ತೇನೆ ಎಂದು ಹೇಳಿದ್ದ ರಮೇಶ್ ಜಾರಕಿಹೊಳಿ ಬಳಿಕ ಕೆಲ ಸಮಯದಲ್ಲೇ ಡಿ.ಕೆ.ಶಿವಕುಮಾರ್ ಅವರದ್ದು ಎಂದು ಹೇಳಿ ಆಡಿಯೋ ಬಿಡುಗಡೆ ಮಾಡಿದ್ದಾರೆ.

19 ಸೆಕೆಂಡ್ ಗಳ ಮಾತುಗಳು ಆಡಿಯೋದಲ್ಲಿದೆ. ನನಗೆ ದುಬೈನಲ್ಲಿ ಮನೆಯಿದೆ, ಲಂಡನ್, ಮುಂಬೈ ನಲ್ಲಿಯೂ ಫ್ಲ್ಯಾಟ್ ಇದೆ. ನಮ್ಮ ಮನೆಯ ಮೇಲೆ ರೇಡ್ ಆದಾಗ ಹಣ ಸೀಜ್ ಆಯ್ತು. ನಮ್ಮ ಮನೆಯಲ್ಲಿ 40–50 ಕೋಟಿ ರೂಪಾಯಿ ಸೀಜ್ ಆಯ್ತು ಎಂದು ಹೇಳಲಾಗಿದೆ. ಅದು ಡಿ.ಕೆ.ಶಿವಕುಮಾರ ಅವರ ಧ್ವನಿ ಎನ್ನುವುದು ರಮೇಶ ಜಾರಕಿಹೊಳಿ ಹೇಳಿಕೆ.

ಆಡಿಯೋ ಬಿಡುಗಡೆ ಬಳಿಕ ಮತ್ತೆ ಸುದ್ದಿಗೋಷ್ಠಿ ನಡೆಸಿದ ರಮೇಶ್ ಜಾರಕಿಹೊಳಿ, ನನ್ನ ವ್ಯಕ್ತಿತ್ವ ಇಡೀ ರಾಜ್ಯಕ್ಕೆ ಗೊತ್ತಿದೆ. ನಾನು ಏನಾದರೂ ಮಾತನಾಡಿದರೆ ಅದನ್ನು ಮಾಡಿಯೇ ತೀರುತ್ತೇನೆ. ನನ್ನ ಬಳಿ ಇಂತಹ ಇನ್ನೂ 20 ಆಡಿಯೋಗಳಿವೆ. ಸಿಡಿ ಕೇಸ್ ನಲ್ಲಿ ಡಿ.ಕೆ.ಶಿವಕುಮಾರ್ ಅರೆಸ್ಟ್ ಆಗಬೇಕು. ಕನಕಪುರದಲ್ಲಿ 100ರೂಪಾಯಿ ಕೊಟ್ಟು ಬ್ಲ್ಯು ಫಿಲ್ಮ್ ತೋರಿಸ್ತಿದ್ದ. ಇಂತಹ ಫ್ರಾಡ್ ಇಟ್ಕೊಂಡು ಕಾಂಗ್ರೆಸ್ ನವರು ರಾಜಕೀಯ ಮಾಡುತ್ತಾರಾ? ರಾಜ್ಯದ ಗತಿಯೇನು ಎಂದು ಪ್ರಶ್ನಿಸಿದ್ದಾರೆ.

## ಇದೇ ನನ್ನ ಕೊನೆಯ ಚುನಾವಣೆ



ಬೆಳಗಾವಿ: ವಿಧಾನಸಭಾ ಚುನಾವಣೆ ಸಮೀಪಿಸುತ್ತಿದ್ದಂತೆ ರಾಜಕೀಯ ನಾಯಕರು ಮತದಾರರನ್ನು ಗೆಲ್ಲಲು ನಾನಾ ಕಸರತ್ತು ನಡೆಸಿದ್ದಾರೆ. ಈ ಮಧ್ಯೆ ಮಾಜಿ ಸಚಿವ ರಮೇಶ್ ಜಾರಕಿಹೊಳಿ ನಿವೃತ್ತಿಯ ಮಾತನಾಡಿದ್ದಾರೆ.

ಬೆಳಗಾವಿಯಲ್ಲಿ ಮಾತನಾಡಿದ ರಮೇಶ್ ಜಾರಕಿಹೊಳಿ, ಆರು ಬಾರಿ ಶಾಸಕನಾಗಿ ಆಯ್ಕೆಯಾಗಿದ್ದೇನೆ. ಏಳು ಬಾರಿ ಶಾಸಕನಾದ ನಂತರ ರಾಜಕೀಯ ನಿವೃತ್ತಿಯಾಗಬೇಕು ಎಂದಿದ್ದೇನೆ. ಎಂಟನೇ ಬಾರಿ ನಿಲ್ಲಬೇಕಾ? ಬೇಡವಾ? ಎಂಬುದರ ನಿರ್ಧಾರವನ್ನು ಬಿಜೆಪಿ ನಾಯಕರಿಗೆ ಬಿಡುತ್ತೇನೆ ಎಂದು ಹೇಳಿದ್ದಾರೆ. ಈ ಮೂಲಕ ರಾಜಕೀಯ ನಿವೃತ್ತಿ ಬಗ್ಗೆ ಮಾತನಾಡಿದ್ದಾರೆ.

ಈ ಚುನಾವಣೆಯಲ್ಲಿ ಸ್ಪರ್ಧೆ ಮಾಡುತ್ತೇನೆ. ಮುಂದಿನ ಚುನಾವಣೆಯಲ್ಲಿ ನಿವೃತ್ತಿಯಾಗಬೇಕು ಎಂದುಕೊಂಡಿದ್ದೇನೆ. 7 ಬಾರಿ ಶಾಸಕನಾದ ಬಳಿಕ ಸಾಕಪ್ಪ ಬೇರೆಯವರಿಗೆ ಅವಕಾಶ ಕೊಡೋಣ ಎಂದು. ಈ ಬಾರಿಯೇ ನಾನು ನಿಲ್ಲುತ್ತಿರಲಿಲ್ಲ.

ಮಹಾನಾಯಕನನ್ನು ಮೂಲೆಗುಂಪು ಮಾಡಲು ಶಾಸಕ ಸ್ಥಾನಕ್ಕೆ ಸ್ಪರ್ಧಿಸುತ್ತೇನೆ. ಆತನನ್ನು ಮನೆಗೆ ಕಳುಹಿಸುವವರೆಗೂ ರಾಜಕೀಯ ನಿವೃತ್ತಿಯಿಲ್ಲ ಎಂದು ಹೇಳಿದ್ದಾರೆ.

## ರಾಜಕ್ಕೆ ದೆಹಲಿ ಸಿಎಂ ಕೇಜ್ರಿವಾಲ್ ಭೇಟಿ



ಧಾರವಾಡ: ಫೆಬ್ರವರಿಯಲ್ಲಿ ಕರ್ನಾಟಕಕ್ಕೆ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಆಗಮಿಸಲಿದ್ದಾರೆ ಎಂದು ಆಮ್ ಆದ್ಮಿ ಪಕ್ಷದ ರಾಜ್ಯ ಕಾರ್ಯದರ್ಶಿ ಎಂ ಅರವಿಂದ್ ಹೇಳಿದರು.

ಧಾರವಾಡದಲ್ಲಿ ಮಾತನಾಡಿದ ಅವರು, ಫೆಬ್ರವರಿ 26 ರಂದು ದಾವಣಗೆರೆಯಲ್ಲಿ ಆಮ್ ಆದ್ಮಿ ಪಕ್ಷದ ಬ್ಲಾಕ್ ಪದಾಧಿಕಾರಿಗಳ ಶಪಥ ಕಾರ್ಯಕ್ರಮ ಇದೆ. ಅದಕ್ಕೆ ಕೇಜ್ರಿವಾಲ್ ಬರುತ್ತಿದ್ದಾರೆ ಎಂದು ತಿಳಿಸಿದರು.

ಫೆಬ್ರವರಿ ಬಳಿಕ ರಾಜ್ಯದ ಪ್ರಮುಖ ಜಿಲ್ಲಾ ಕೇಂದ್ರಗಳಿಗೆ ಕೂಡಾ ಅವರು ಬರಲಿದ್ದಾರೆ. ಫೆಬ್ರವರಿ 26ರ ನಂತರ ಕೇಜ್ರಿವಾಲ್ ಅವರ ಟೂರ್ ಪ್ರೋಗ್ರಾಮ್ ಮಾಡುತ್ತಿದ್ದೇವೆ. ಹುಬ್ಬಳ್ಳಿ, ಧಾರವಾಡ, ಬೆಳಗಾವಿಯಲ್ಲಿ ಕೇಜ್ರಿವಾಲ್ ಅವರ ಕಾರ್ಯಕ್ರಮಗಳು ಇರಲಿದೆ. ಚುನಾವಣೆಗೆ ಮೊದಲೇ ಈ ಕಾರ್ಯಕ್ರಮಗಳು ನಡೆಯಲಿದೆ ಎಂದರು.

ನಾನು ಕೂಡಾ 2 ದಿನಗಳಲ್ಲಿ ದೆಹಲಿಗೆ ಹೋಗುತ್ತಿದ್ದೇನೆ.

ಸದ್ಯ ಕೇಜ್ರಿವಾಲ್ ಅವರ ತಾತ್ಕಾಲಿಕ ಭೇಟಿಯ ಪಟ್ಟಿ ಮಾಡಿದ್ದೇವೆ. ಅವರು ಯಾವ ದಿನಾಂಕಕ್ಕೆ ಸಿಗುತ್ತಾರೆ ಎಂಬುದನ್ನು ನೋಡಿಕೊಂಡು ಫೈನಲ್ ಪಟ್ಟಿ ಮಾಡುತ್ತೇವೆ ಎಂದು ಆಪ್ ರಾಜ್ಯ ಕಾರ್ಯದರ್ಶಿ ತಿಳಿಸಿದರು.

## ಪ್ರಾಥಮಿಕ ಶಾಲಾ ಶಿಕ್ಷಕರ ತಾತ್ಕಾಲಿಕ ಆಯ್ಕೆ ಪಟ್ಟಿ ರದ್ದು




ಬೆಂಗಳೂರು: ಪ್ರಾಥಮಿಕ ಶಾಲಾ ಶಿಕ್ಷಕರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ರದ್ದುಗೊಳಿಸಿ ಹೈಕೋರ್ಟ್ ಮಹತ್ವದ ಆದೇಶ ಹೊರಡಿಸಿದೆ.

ಇತ್ತೀಚೆಗೆ ಪ್ರಕಟವಾಗಿದ್ದ ಪ್ರಾಥಮಿಕ ಶಾಲಾ ಶಿಕ್ಷಕರ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಶ್ನಿಸಿ ಹಲವು ಅಭ್ಯರ್ಥಿಗಳು ಹೈಕೋರ್ಟ್ ಮೆಟ್ಟಿಲೇರಿದ್ದರು. ಪತಿಯ ಜಾತಿ, ಆದಾಯ ಪ್ರಮಾಣ ಪತ್ರ, ತಂದೆಯ ಜಾತಿ, ಆದಾಯ ಪ್ರಮಾಣ ಪತ್ರ ಪರಿಗಣನೆ ಮಾಡಲಾಗಿತ್ತು. ಇದನ್ನು ಪ್ರಶ್ನಿಸಿ ಹೈಕೋರ್ಟ್ ನಲ್ಲಿ ಅರ್ಜಿ ಸಲ್ಲಿಸಲಾಗಿತ್ತು.

ಶಿಕ್ಷಣ ಇಲಾಖೆಯ ನಿಯಮ ಕಾನೂನುಬಾಹಿರ ಎಂದು ಹಿರಿಯ ವಕೀಲ ಶಶಿಕಿರಣ್ ಶೆಟ್ಟಿ ವಾದ ಮಂಡಿಸಿದ್ದರು. ಅಂತಿಮವಾಗಿ ಹೈಕೋರ್ಟ್ ಏಕಸದಸ್ಯಪೀಠದ ನ್ಯಾ. ಎಂ.ನಾಗಪ್ರಸನ್ನ, ಪ್ರಾಥಮಿಕ ಶಾಲಾ ಶಿಕ್ಷಕರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ರದ್ದುಗೊಳಿಸಿದ್ದಾರೆ. ಅಲ್ಲದೇ ಹೊಸದಾಗಿ ಆಯ್ಕೆಪಟ್ಟಿ ಪ್ರಕಟಿಸುವಂತೆ ಶಿಕ್ಷಣ ಇಲಾಖೆಗೆ ಆದೇಶ ನೀಡಿದ್ದಾರೆ.

## ಪಾಕ್ ನಲ್ಲಿ ಆತ್ಮಾಹುತಿ ಬಾಂಬ್ ಸ್ಫೋಟ



ಪೇಶಾವರ: ಪೇಶಾವರದ ಪೊಲೀಸ್ ಲೈನ್ಸ್ ಪ್ರದೇಶದ ಮಸೀದಿಯೊಂದರಲ್ಲಿ ಇಂದು ನಡೆದ ಪ್ರಬಲ ಆತ್ಮಹತ್ಯಾ ಸ್ಫೋಟದಲ್ಲಿ 32 ಮಂದಿ ಮೃತಪಟ್ಟಿದ್ದು, 150ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎಂದು ಭದ್ರತಾ ಮತ್ತು ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ.

ಭದ್ರತಾ ಅಧಿಕಾರಿಗಳ ಪ್ರಕಾರ, ಆತ್ಮಹತ್ಯಾ ದಾಳಿಕೋರನು ಪ್ರಾರ್ಥನೆಯ ಸಮಯದಲ್ಲಿ ಮುಂದಿನ ಸಾಲಿನಲ್ಲಿದ್ದು ತನ್ನನ್ನು ತಾನು ಸ್ಫೋಟಿಸಿಕೊಂಡಿದ್ದಾನೆ.

ಪರಿಣಾಮ ಜೊಹ್ರ್ ಪ್ರಾರ್ಥನೆ ಸಲ್ಲಿಸುತ್ತಿದ್ದ 150ಕ್ಕೂ ಹೆಚ್ಚು ಮಂದಿಗೆ ಗಾಯಗಳಾಗಿದೆ.

ಸ್ಫೋಟದಲ್ಲಿ ಗಾಯಗೊಂಡಿರುವವರ ಪೈಕಿ ಹಲವರು ಗಂಭೀರವಾಗಿ ಗಾಯಗೊಂಡಿದ್ದು ಸಾವಿನ ಸಂಖ್ಯೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇವೆ. ಸದ್ಯ ಗಾಯಾಳುಗಳನ್ನು ಪೇಶಾವರ ಲೇಡಿ ರೀಡಿಂಗ್ ಆಸ್ಪತ್ರೆಗೆ ರವಾನಿಸಲಾಗಿದೆ.

ಸ್ಫೋಟದಲ್ಲಿ 32 ಮಂದಿ ಮೃತಪಟ್ಟಿದ್ದಾರೆ. ಇನ್ನು 150 ಮಂದಿ ಗಾಯಾಳುಗಳನ್ನು ಆಸ್ಪತ್ರೆಗೆ ಕರೆತರಲಾಗಿದೆ ಎಂದು ಆಸ್ಪತ್ರೆಯ ವಕ್ತಾರರು ತಿಳಿಸಿದ್ದಾರೆ. ಇದರಲ್ಲಿ 10ಕ್ಕೂ ಹೆಚ್ಚು ಗಾಯಾಳುಗಳ ಸ್ಥಿತಿ ಚಿಂತಾಜನಕವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಆತ್ಮಾಹುತಿ ಬಾಂಬ್ ದಾಳಿಯನ್ನು ತೀವ್ರವಾಗಿ ಖಂಡಿಸಿರುವ ಪ್ರಧಾನಿ ಶಹಬಾಜ್ ಷರೀಫ್ ಅವರು, ಸಂತ್ರಸ್ತರಿಗೆ ಸಾಧ್ಯವಾದಷ್ಟು ಉತ್ತಮ ವೈದ್ಯಕೀಯ ಚಿಕಿತ್ಸೆ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಆದೇಶಿಸಿದ್ದಾರೆ. ಅಲ್ಲದೆ ದಾಳಿಯ ಹಿಂದಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿಯೂ ಭರವಸೆ ನೀಡಿದ್ದಾರೆ.

## ಕೋಲಾರದಿಂದಲೇ ಸಿದ್ದರಾಮಯ್ಯ ಸ್ಪರ್ಧೆ: ಶಾಸಕ ಡಾ. ಯತೀಂದ್ರ



ಕೋಲಾರ: ಮಾಜಿ ಸಿಎಂ ಸಿದ್ದರಾಮಯ್ಯ ಕೋಲಾರದಿಂದಲೇ ಸ್ಪರ್ಧೆ ಮಾಡ್ತಾರೆ. ಅವರು ಕೋಲಾರಕ್ಕೆ ಬರಲ್ಲ ಅನ್ನೋದು ಅಪಪ್ರಚಾರ ಎಂದು ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಮಾಜಿ ಸಿಎಂ ಯಡಿಯೂರಪ್ಪ ಮತ್ತು ಅನೇಕರು ಸಿದ್ದರಾಮಯ್ಯ ಕೋಲಾರದಲ್ಲಿ ಸ್ಪರ್ಧೆ ಮಾಡಲ್ಲ ಎನ್ನುತ್ತಿದ್ದಾರೆ. ಬೇರೆ ಪಕ್ಷದವರಿಗೆ ಏನು ಗೊತ್ತು. ಅಪ್ಪ, ಹೈಕಮಾಂಡ್ ಹೇಳಿದರೆ ಕೋಲಾರದಿಂದ ಸ್ಪರ್ಧೆ ಮಾಡುವುದಾಗಿ ಹೇಳಿದ್ದಾರೆ. ನಾನು ಸಹ ವರುಣದಲ್ಲಿ ಸ್ಪರ್ಧೆ ಮಾಡುವಂತೆ ಮನವಿ ಮಾಡಿದೆ. ಆದ್ರೆ ಅವರ ಮನಸ್ಸು ಬೇರೆ ಕಡೆ ಇದೆ. ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯ ಅವರ ಇಚ್ಛೆಗೆ ವಿರೋಧಿಸಲ್ಲ.

ಕೊನೇ ಕ್ಷಣದಲ್ಲಿ ಸಿದ್ಧತೆಗಳನ್ನ ಮಾಡಿಕೊಳ್ಳುವುದು ಕಷ್ಟ. ಹೀಗಾಗಿ ಕೋಲಾರದಲ್ಲಿ ಚುನಾವಣೆ ಕೆಲಸ ಆರಂಭ ಮಾಡಲಾಗಿದೆ ಎಂದು ಯತೀಂದ್ರ ಹೇಳಿದ್ದಾರೆ.

ಕೋಲಾರದಲ್ಲಿ ಸಿದ್ದರಾಮಯ್ಯ ಅವರಿಗಾಗಿಯೇ ಅವರ ಅಭಿಮಾನಿಗಳು ಮನೆ ರೆಡಿ ಮಾಡಿದ್ದಾರೆ. ಆ ಮನೆ ನೋಡಿಕೊಂಡು ಹೋಗಲು ಯತೀಂದ್ರ ಸಿದ್ದರಾಮಯ್ಯ ಆಗಮಿಸಿದ್ದರು. ಈ ವೇಳೆ ಮಾತನಾಡಿದ ಅವರು, ನನಗೆ ಮತ್ತು ತಂದೆಗೆ ವಾಸ್ತು ಮೇಲೆ ನಂಬಿಕೆ ಇಲ್ಲ. ಇದೇ ಮೊದಲ ಬಾರಿಗೆ ನಾನು ಈ ಮನೆ ನೋಡುತ್ತಿರುವುದು. ಅಪ್ಪ ನೋಡಿಲ್ಲ. ಮನೆ ಚೆನ್ನಾಗಿದೆ. ತಂದೆ ಅವರ ಅಂತಿಮ ತೀರ್ಮಾನ ತೆಗೆದುಕೊಳ್ಳತ್ತಾರೆ. ಅಪ್ಪನ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮುಖಂಡರು ಕೈ ಜೋಡಿಸಬೇಕಾಗಿದೆ. ಸಿದ್ದರಾಮಯ್ಯ ಕೋಲಾರಕ್ಕೆ ಬರ್ತಿದ್ದಾರೆ ಗೆಲ್ಲಿಸಿಕೊಡುವಂತೆ ಯತೀಂದ್ರ ಸಿದ್ದರಾಮಯ್ಯ ಮನವಿ ಮಾಡಿದ್ದಾರೆ.

ಯತೀಂದ್ರ ಸಿದ್ದರಾಮಯ್ಯ ಕೋಲಾರದ ಬಸವನತ್ತ, ಕೋಡಿರಾಮಸಂದ್ರ, ಹೊನ್ನೇನಹಳ್ಳಿ ಗ್ರಾಮಗಳಿಗೆ ಭೇಟಿ ನೀಡಿದ್ದಾರೆ. ಅತಿ ಹೆಚ್ಚು ಕುರುಬ ಸಮುದಾಯದ ಜನರಿರುವ ಗ್ರಾಮಗಳಲ್ಲಿ ಯತೀಂದ್ರ ಅವರನ್ನ ಹೆಗಲ ಮೇಲೆ ಹೊತ್ತು ಮೆರವಣಿಗೆ ಮಾಡಲಾಗಿದೆ. ಚುನಾವಣೆ ಸಮೀಪಿಸುತ್ತಿದ್ದಂತೆ ಕ್ಷೇತ್ರದ ಜನರ ನಾಡಿಮಿಡಿತ ಅರಿಯಲು ಯತೀಂದ್ರ ಕ್ಷೇತ್ರದ ರೌಂಡ್ಸ್ ಹಾಕಿದ್ದಾರೆ.

## ರಮೇಶ್ ಜಾರಕಿಹೊಳಿಗೆ ಖಡಕ್ ಎಚ್ಚರಿಕೆ ಕೊಟ್ಟ ಎಂಎಲ್‌ಸಿ ಚನ್ನರಾಜ ಹಟ್ಟಿಹೊಳಿ



ಬೆಳಗಾವಿ: ಮಾಜಿ ಸಚಿವ ರಮೇಶ್ ಜಾರಕಿಹೊಳಿ ಸುಳ್ಳು ಹೇಳಿಕೆಗಳನ್ನು ನೀಡುತ್ತಿದ್ದಾರೆ. ಅವರಿಗೆ ಸುಳ್ಳು ಹೇಳುವ ಚಟ ಬಹಳ ಇದೆ. ಬೆಳಗಾವಿಯಲ್ಲಿ ಶಾಸಕಿ ಲಕ್ಷ್ಮಿ ಹೆಬ್ಬಾಳ್ಕರ್ ವರ್ಚಸ್ಸು ಕಡಿಮೆ ಮಾಡಲು ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಎಂಎಲ್‌ಸಿ ಚನ್ನರಾಜ ಹಟ್ಟಿಹೊಳಿ ಕಿಡಿಕಾರಿದ್ದಾರೆ.

ಬೆಳಗಾವಿಯಲ್ಲಿ ತಮ್ಮನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಚನ್ನರಾಜ ಹಟ್ಟಿಹೊಳಿ, ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ರಮೇಶ್ ಜಾರಕಿಹೊಳಿ ಹೇಳಿಕೆಯನ್ನು ಖಂಡಿಸುತ್ತೇನೆ. ಅಸಭ್ಯವಾಗಿ ಮಾತನಾಡುವ ಚಟ ಬಿಡದಿದ್ದರೆ ರಮೇಶ್ ಜಾರಕಿಹೊಳಿಗೆ ಜನ ತಕ್ಕ ಪಾಠ ಕಲಿಸುತ್ತಾರೆ ಎಂದು ಎಚ್ಚರಿಕೆ ನೀಡಿದರು.

ರಮೇಶ್ ಜಾರಕಿಹೊಳಿ ಸುಳ್ಳು ಆರೋಪ ಮಾಡುವುದನ್ನು ಅಭ್ಯಾಸ ಮಾಡಿಕೊಂಡಿದ್ದಾರೆ. ಮೊನ್ನೆ ಸುಳೇಬಾವಿಯಲ್ಲಿ ಪ್ರತಿ ಓಟಿಗೆ 6 ಸಾವಿರ ರೂ. ಕೊಡುವುದಾಗಿ ಹೇಳಿದ್ದನ್ನು ಮಾಧ್ಯಮಗಳು ಪ್ರಸಾರ ಮಾಡಿವೆ., ಮರು ದಿನ ನಾನು ಹಾಗೆ ಹೇಳಿಯೇ ಇಲ್ಲ ಎಂದರು. ಸೌಭಾಗ್ಯ ಲಕ್ಷ್ಮೀ ಸಕ್ಕರೆ ಕಾರ್ಖಾನೆಯಲ್ಲಿ ಎಥೆನಾಲ್ ಘಟಕ ಮಾಡುವುದಾಗಿ ಹೇಳಿ ಸಾಲ ಎತ್ತಿ ಘಟಕವನ್ನೇ ಮಾಡಲಿಲ್ಲ. ಈಗ ಕಾರ್ಖಾನೆ ದಿವಾಳಿಯಾಗಿದೆ ಎಂದು ಸಾರಿದ್ದಾರೆ. ಇಂತವರಿಗೆ ನಮ್ಮ ಬಗ್ಗೆ ಮಾತನಾಡಲು ಏನು ನೈತಿಕತೆ ಇದೆ ಎಂದು ಚನ್ನರಾಜ ಪ್ರಶ್ನಿಸಿದರು.

ಅವರ ಅಪರಾಧವನ್ನು ನಮ್ಮ ಮೇಲೆ ತಿರುಗಿಸುವ ಯತ್ನ ಮಾಡುತ್ತಿದ್ದಾರೆ. ಹರ್ಷ ಸಕ್ಕರೆ ಕಾರ್ಖಾನೆ ದಾಖಲೆಗಳು ವೆಬ್ ಸೈಟ್ ನಲ್ಲಿ ಎಲ್ಲರಿಗೂ ಲಭ್ಯವಿವೆ. ಒಮ್ಮೆ ಅವ್ಯವಹಾರ ನಡೆದಿದ್ದರೆ ದಾಖಲೆ ಬಿಡುಗಡೆ ಮಾಡಲಿ. ಸುಮ್ಮನೆ ಹೇಳಿಕೆ ನೀಡುವುದು ಸರಿಯಲ್ಲ. ರಾಜ್ಯದ ಜನ ಎಲ್ಲವನ್ನೂ ಗಮನಿಸುತ್ತಿದ್ದಾರೆ. ಕೀಳುಮಟ್ಟದ ಹೇಳಿಕೆ ಕೊಡುವುದನ್ನು ಜಾರಕಿಹೊಳಿ ಮೊದಲು ನಿಲ್ಲಿಸಲಿ. ಅವರಷ್ಟು ಕೀಳು ಮಟ್ಟಕ್ಕೆ ಇಳಿಯಲು ನಮಗೆ ಸಾಧ್ಯವಿಲ್ಲ. ನಾನು ಮತ್ತು ಲಕ್ಷ್ಮೀ ಹೆಬ್ಬಾಳಕರ್ ಇಬ್ಬರೂ ವಿದ್ಯಾವಂತರಿದ್ದೇವೆ. ಜನರು ನಮ್ಮನ್ನು ಗೌರವದಿಂದಲೇ ನೋಡುತ್ತಾರೆ ಎಂದು ಗುಡುಗಿದ್ದಾರೆ.

ಲಕ್ಷ್ಮಿ ಹೆಬ್ಬಾಳ್ಕರ್ ಗೆ ಟಿಕೆಟ್ ಕೊಡಿಸಿದ್ದೇ ನಾನು ಎಂದು ಹೇಳಿರುವ ರಮೇಶ್ ಜಾರಕಿಹೊಳಿ ಹೇಳಿಕೆಗೆ ತಿರುಗೇಟು ನೀಡಿದ ಚನ್ನರಾಜ ಹಟ್ಟಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಟಿಕೆಟ್ ಕೊಟ್ಟಿದ್ದು ಜಿ.ಪರಮೇಶ್ವರ್, ಆಗ ಡಿ.ಕೆ.ಶಿವಕುಮಾರ ಕೆಪಿಸಿಸಿ ಅಧ್ಯಕ್ಷರಿರಲಿಲ್ಲ. ಪರಮೇಶ್ವರ ಅಧ್ಯಕ್ಷರಾಗಿದ್ದರು.

ಟಿಕೆಟ್ ಕೊಡಿಸಲು ರಮೇಶ ಜಾರಕಿಹೊಳಿ ಸೋನಿಯಾ ಗಾಂದಿ ಅವರಿಗಿಂತ, ರಾಹುಲ್ ಗಾಂಧಿಯವರಿಗಿಂತ, ಪ್ರಿಯಾಂಕಾ ಗಾಂಧಿ ಅವರಿಗಿಂತ, ಡಾ.ಜಿ.ಪರಮೇಶ್ವರ ಅವರಿಗಿಂತ, ಕಾಂಗ್ರೆಸ್ ಪಕ್ಷಕ್ಕಿಂತ ದೊಡ್ಡವರಾ ಎಂದು ಪ್ರಶ್ನಿಸಿದ ಚನ್ನರಾಜ ಹಟ್ಟಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್ ತಮ್ಮ ಸ್ವಂತ ಬಲದಿಂದ ಕ್ಷೇತ್ರದಲ್ಲಿ ಗೆದ್ದಿದ್ದಾರೆ. ಹೊರತು ರಮೇಶ್ ಜಾರಕಿಹೊಳಿ ಗೆಲ್ಲಿಸಿಲ್ಲ. ಲಕ್ಷ್ಮಿ ಹೆಬ್ಬಾಳ್ಕರ್ ಅವರನ್ನು ಕುಗ್ಗಿಸಲು ರಮೇಶ್ ಜಾರಕಿಹೊಳಿ ಇಲ್ಲಸಲ್ಲದ ಆರೋಪ ಮಾತನಾಡುತ್ತಿದ್ದಾರೆ. ಬಿಜೆಪಿ ಸೇರುವಂತೆ ನಮಗೂ ಆಹ್ವಾನ ನೀಡಿದ್ದರು. ಆದರೆ ನಾವು ಅದಕ್ಕೆ ಒಪ್ಪಲಿಲ್ಲ. ಸಮ್ಮಿಶ್ರ ಸರಕಾರ ಕೆಡಗುವುದು ಬೇಡ. ನೀವು ಹೋಗಬೇಡಿ ಎಂದಿದ್ದೆವು.. ಹಾಗಾಗಿ ನಮ್ಮ ಬಗ್ಗೆ ಅವರಿಗೆ ವೈಮನಸ್ಸು ಆರಂಭವಾಯಿತು ಎಂದು ಚನ್ನರಾಜ ವಿವರಿಸಿದರು.

ನಾವು ಬೆಳಗಾವಿ ಜಿಲ್ಲೆಯ ಎಲ್ಲ 18 ಕ್ಷೇತ್ರಗಳಿಗೂ ಪ್ರಚಾರಕ್ಕೆ ಹೋಗುತ್ತೇವೆ. ಇವರಂತೆ ವಯಕ್ತಿಕ ಜಿದ್ದು ಇಟ್ಟುಕೊಂಡು ಪ್ರಚಾರ ಮಾಡುವುದಿಲ್ಲ. ಪಕ್ಷದ ತತ್ವ, ಸಿದ್ಧಾಂತದ ಮೇಲೆ ಕೆಲಸ ಮಾಡುತ್ತೇವೆ. ಜಿಲ್ಲೆಯಲ್ಲಿ ಕಾಂಗ್ರೆಸ್ ಗೆ ಹೆಚ್ಚು ಸ್ಥಾನ ಗೆಲ್ಲಿಸಿಕೊಡುವ ಜವಾಬ್ದಾರಿ ನಮ್ಮ ಮತ್ತು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಅವರ ಮೇಲಿದೆ. ಆ ಕರ್ತವ್ಯವನ್ನು ಸರಿಯಾಗಿ ನಿಭಾಯಿಸುತ್ತೇವೆ. ಅದರ ಭಾಗವಾಗಿ ಗೋಕಾಕ ಕ್ಷೇತ್ರದಲ್ಲೂ ಪ್ರಚಾರ ಮಾಡುತ್ತೇವೆ ಎಂದು ತಿಳಿಸಿದರು.

## ನಳೀನ್ ಕುಮಾರ್ ಕಟೀಲ್ ಒಬ್ಬ ಬಫೂನ್: ಸಿದ್ದರಾಮಯ್ಯ ವಾಗ್ದಾಳಿ



ನವದೆಹಲಿ: ವಿಪಕ್ಷ ನಾಯಕ ಸಿದ್ದರಾಮಯ್ಯ ಹಾಗೂ ಎಐಸಿಸಿ ಅಧ್ಯಕ್ಷ ಖರ್ಗೆ ಪುತ್ರರಿಬ್ಬರೂ ಬಿಜೆಪಿಗೆ ಸೇರಲಿದ್ದಾರೆ ಎಂದು ಹೇಳಿಕೆ ನೀಡಿರುವ ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ವಿರುದ್ಧ ಸಿದ್ದರಾಮಯ್ಯ ಹಿಗ್ಗಾ ಮುಗ್ಗಾ ವಾಗ್ದಾಳಿ ನಡೆಸಿದ್ದಾರೆ.

ಸಿದ್ದರಾಮಯ್ಯ ಪುತ್ರ ಯತೀಂದ್ರ ಸಿದ್ದರಾಮಯ್ಯ ಹಾಗೂ ಖರ್ಗೆ ಪುತ್ರ ಪ್ರಿಯಾಂಕ ಖರ್ಗೆ ಬಿಜೆಪಿ ಸೇರಲಿದ್ದಾರೆ ಎಂಬ ನಳೀನ್ ಕುಮಾರ್ ಕಟೀಲ್ ಹೇಳಿಕೆಗೆ ನವದೆಹಲಿಯಲ್ಲಿ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ನಳೀನ್ ಕುಮಾರ್ ಒಬ್ಬ ಬಫೂನ್ ಎಂದು ಗುಡುಗಿದರು.

ನಳೀನ್ ಕುಮಾರ್ ಕಟೀಲ್ ಒಬ್ಬ ಬಫೂನ್, ವಿಧೂಷಕ. ಕಟೀಲುಗೆ ರಾಜಕೀಯ ಜ್ಞಾನವಿಲ್ಲ, ಆತ ಏನು ಮಾತನಾಡುತ್ತಾನೆ ಎಂಬುದು ಅವನಿಗೆ ಗೊತ್ತಿಲ್ಲ ಎಂದು ಏಕವಚನದಲ್ಲಿ ವಾಗ್ದಳಿ ನಡೆಸಿದ್ದಾರೆ.

## ಶಾಸಕ ರಮೇಶ್ ಮಾಡಿರುವ ಆರೋಪಗಳು ವೈಯಕ್ತಿಕವಾಗಿವೆ: ಶಾಸಕ ಸತೀಶ್ ಜಾರಕಿಹೊಳಿ



ಬೆಳಗಾವಿ: ಶಾಸಕ ರಮೇಶ್ ಮಾಡಿರುವ ಆರೋಪಗಳು ವೈಯಕ್ತಿಕವಾಗಿವೆ, ನಾನು ಪ್ರತಿಕ್ರಿಯಿಸುವುದು ಉತ್ತಮವಲ್ಲ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಹೇಳಿದರು.

ಶಾಸಕ ರಮೇಶ್ ಜಾರಕಿಹೊಳಿ ಅವರು ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ ಮತ್ತು ಕಾಂಗ್ರೆಸ್ ಶಾಸಕಿ ಲಕ್ಷ್ಮಿ ಹೆಬ್ಬಾಳ್ಕರ್ ಅವರ ವಿರುದ್ಧ ಆರೋಪಗಳನ್ನು ಮಾಡಿರುವ ಕುರಿತು ಚಿಕ್ಕೋಡಿಯಲ್ಲಿ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು, ಇದು ವೈಯಕ್ತಿಕ ವಿಷಯವಾಗಿರುವುದರಿಂದ ತಾನೇನೂ ಹೇಳಲಾಗದು, ಅವರ ಆರೋಪಗಳಿಗೆ ಸಂಬಂಧಿಸಿದಂತೆ ಪಕ್ಷದ ಅಧ್ಯಕ್ಷರು ಮತ್ತು ಸಿ ಎಲ್ ಪಿ ನಾಯಕ ಪ್ರತಿಕ್ರಿಯೆ ನೀಡುತ್ತಾರೆ ಎಂದು ಹೇಳಿದರು.

## ಮಹದಾಯಿ ವಿಷಯದಲ್ಲಿ ಯಾವುದೇ ರಾಜಿ ಇಲ್ಲ: ಪ್ರಮೋದ್ ಸಾವಂತ್



ಪಣಜಿ: ಮಹದಾಯಿ ವಿಷಯದಲ್ಲಿ ಯಾವುದೇ ರಾಜಿ ಇಲ್ಲ. ನದಿ ನೀರು ತಿರುವು ಮಾಡದಂತೆ ನದಿಯನ್ನು ರಕ್ಷಿಸುವ ನಿಟ್ಟಿನಲ್ಲಿ ಗೋವಾ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, “ಮಹದಾಯಿ ವಿಷಯದಲ್ಲಿಸುಪ್ರೀಂಕೋರ್ಟ್‌ನಲ್ಲಿ ಗೋವಾ ಬಲವಾದ ಕಾನೂನು ಹೋರಾಟ ನಡೆಸುತ್ತಿದೆ’ ಎಂದರು.

ಇನ್ನೊಂದೆಡೆ, ಮಹದಾಯಿ ವಿವಾದದ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆ ಬೆನ್ನಲ್ಲೇ ಗೋವಾ ಪ್ರತಿಪಕ್ಷಗಳು ಪ್ರಮೋದ್ ಸಾವಂತ್ ಅವರ ರಾಜೀನಾಮೆಗೆ ಒತ್ತಾಯಿಸಿವೆ. ಬೆಳಗಾವಿಯಲ್ಲಿ ಶನಿವಾರ ನಡೆದ ಬಿಜೆಪಿ “ಜನ ಸಂಕಲ್ಪ ಯಾತ್ರೆ’ ಸಮಾರಂಭದಲ್ಲಿ ಅಮಿತ್ ಶಾ, “ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಅನೇಕ ವರ್ಷಗಳ ಕರ್ನಾಟಕ–ಗೋವಾ ನಡುವಿನ ಮಹದಾಯಿ ನೀರು ಹಂಚಿಕೆ ವಿವಾದವನ್ನು ಬಗೆಹರಿಸಿದೆ. ಕರ್ನಾಟಕಕ್ಕೆ ಮಹದಾಯಿ ನೀರು ನೀಡಿದ್ದು, ಈ ಮೂಲಕ ರಾಜ್ಯದ ಹಲವು ಜಿಲ್ಲೆಗಳ ರೈತರಿಗೆ ಅನುಕೂಲವಾಗಲಿದೆ’ ಎಂದು ಹೇಳಿದ್ದರು. ಗೋವಾ ನಿಯೋಗ ಅಮಿತ್ ಶಾ ಅವರನ್ನು ಭೇಟಿಯಾದಾಗ ಅವರ ಹೇಳಿಕೆ ಬಗ್ಗೆ ಸ್ಪಷ್ಟನೆ ಕೇಳಲಾಗುವುದು. ನದಿ ಪಾತ್ರದಲ್ಲೇ ನದಿಯ ನೀರು ಬಳಸಲು ನಮಗೆ ಯಾವುದೇ ಅಭ್ಯಂತರವಿಲ್ಲ. ಆದರೆ ನದಿ ನೀರು ತಿರುವಿಗೆ ನಮ್ಮ ತೀವ್ರ ವಿರೋಧವಿದೆ ನೀಲೇಶ್ ಕಬ್ರಾಲ್, ಗೋವಾ ಸಚಿವ.

## ಪತಿ ಮುಖಕ್ಕೆ ಆ್ಯಸಿಡ್ ಎರಚಿದ ಪತ್ನಿ




ಲಕ್ನೋ: ಮನೆಗೆ ತಡವಾಗಿ ಬಂದಿದ್ದನ್ನು ಪ್ರಶ್ನಿಸಿದ್ದಕ್ಕೆ ರೊಚ್ಚಿಗೆದ್ದ ಪತ್ನಿಯೊಬ್ಬಳು ಪತಿ ಮುಖದ ಮೇಲೆ ಆ್ಯಸಿಡ್ ಎರಚಿದ ವಿಲಕ್ಷಣ ಘಟನೆಯೊಂದು ಉತ್ತರಪ್ರದೇಶದ ಕಾನ್ಪುರದ ಕೂಪರ್ ಗಂಜ್ ಪ್ರದೇಶದಲ್ಲಿ ನಡೆದಿದೆ.

ಆ್ಯಸಿಡ್ ದಾಳಿ ಗೆ ಒಳಗಾದ ವ್ಯಕ್ತಿಯನ್ನು ಡಬ್ಬು ಎಂದು ಗುರುತಿಸಲಾಗಿದ್ದು, ಉರ್ಸಾಲ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಈ ಸಂಬಂಧ ಗಂಜ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಡಬ್ಬು ತನ್ನ ಪತ್ನಿ ಜೊತೆ ಮನೆಗೆ ಬರಲು ತಡವಾಗಿದ್ದು ಏಕೆ ಎಂದು ಪ್ರಶ್ನಿಸಿದ್ದಾರೆ. ಈ ವೇಳೆ ಇಬ್ಬರ ಮಧ್ಯೆ ಮಾತಿಗೆ ಮಾತು ಬೆಳೆದಿದೆ. ಅಲ್ಲದೆ ಪತಿಯ ಮಾತಿನಿಂದ ಸಿಟ್ಟಿಗೆದ್ದ ಪತ್ನಿ ಆ್ಯಸಿಡ್ ಬಾಟ್ಲಿ ತೆಗೆದುಕೊಂಡು ಮುಚ್ಚಳ ತೆಗೆದು ಪತಿಯ ಮುಖಕ್ಕೆ ಎರಚಿದ್ದಾಳೆ ಎಂದು ಆತ ನಡೆದ ಘಟನೆಯನ್ನು ವಿವರಿಸಿದ್ದಾನೆ. ಪ್ರಕರಣ ಸಂಬಂಧ ಪೊಲೀಸರು ಪತ್ನಿಯನ್ನು ಬಂಧಿಸಿ ವಿಚಾರಣೆ ನಡೆಸಿದ್ದಾರೆ.

# ರಾಷ್ಟ್ರೀಯ ಸ್ವಚ್ಛತಾ ದಿನ: 18 ಶಾಲೆಗಳಲ್ಲಿ ಸ್ವಚ್ಛತೆ–ಶುದ್ಧ ಕುಡಿಯುವ ನೀರಿಗಾಗಿ ಕ್ರಮ

ಬಳ್ಳಾರಿ : ಬಳ್ಳಾರಿ–ವಿಜಯನಗರ ಸ್ಥಳೀಯ ಸಂಸ್ಥೆಗಳ ವಿಧಾನಪರಿಷತ್ ಸದಸ್ಯ ವೈ.ಎಂ. ಸತೀಶ್ ಅವರು ಬಳ್ಳಾರಿಯ 18 ಸರ್ಕಾರಿ ಶಾಲೆಗಳನ್ನು ಗುರುತಿಸಿ, ಶೌಚಾಲಯಗಳ ದುರಸ್ತಿ ಮತ್ತು ನಿರ್ವಹಣೆಗಾಗಿ ವೈಯಕ್ತಿಕವಾಗಿ ಆರು ಸಿಬ್ಬಂದಿಯನ್ನು ನೇಮಕ ಮಾಡಿ ದೇಶಕ್ಕೇ ಮಾದರಿ ಎನಿಸಿದ್ದಾರೆ. ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ಒಟ್ಟು 63 ಸರ್ಕಾರಿ ಶಾಲೆಗಳಿವೆ.

ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಇನ್ನಿತರೆ ಮಾನದಂಡಗಳ ಆಧಾರದ ಮೇಲೆ ಒಟ್ಟು 18 ಶಾಲೆಗಳಲ್ಲಿಯ ಶೌಚಾಲಯಗಳ ನಿರ್ವಹಣೆಯ ಅನಿವಾರ್ಯತೆಯನ್ನು ಗುರುತಿಸಿದ್ದಾರೆ.ಮೊದಲನೆಯ ಹಂತದಲ್ಲಿ ಜಿಲ್ಲಾಧಿಕಾರಿ ಕಚೇರಿ ಸಮೀಪದ ಸರ್ಕಾರಿ ಬಾಲಕಿರಯರ ಪ್ರೌಢಶಾಲೆ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಶ್ರೀರಾಂಪುರ ಕಾಲೊನಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಬಾಪೂಜಿ ನಗರದ ಸರ್ಕಾರಿ ಪ್ರೌಢಶಾಲೆ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕಂಬಳಿಬಜಾರ್‌ನ ಹಿರಿಯ ಪ್ರಾಥಮಿಕ ಶಾಲೆ, ಕಾರ್ಕಲ್‌ತೋಟದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಸರ್ಕಾರಿ ಮುನಿಸಿಪಲ್ ಹೈಸ್ಕೂಲ್, ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಪಟೇಲ್‌ನಗರ ಮತ್ತು ಗುಗ್ಗರಹಟ್ಟಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶೌಚಾಲಗಳ ನಿರ್ವಹಣೆ ಮತ್ತು ಶುದ್ಧವಾದ ಕುಡಿಯುವ ನೀರಿಗಾಗಿ ನಾಲ್ಕು ಸಿಬ್ಬಂದಿಯನ್ನು ನೇಮಕ ಮಾಡಿಕೊಂಡಿದ್ದಾರೆ.

ಎರಡನೇ ಹಂತದಲ್ಲಿ ಕಪ್ಪಗಲ್ಲು ರಸ್ತೆಯ ಸರ್ಕಾರಿ ಪ್ರೌಢಶಾಲೆ, ಗಾಂಧಿನಗರದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಕೋಟೆ ಪ್ರದೇಶದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಇಂದಿರಾನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ (ಅಂಬೇಡ್ಕರ್ ಶಾಲೆ), ಮೇದಾರಓಣಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಶಾಸ್ತ್ರಿನಗರದ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಹವಂಭಾವಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶೌಚಾಲಯದಲ್ಲಿಯ ಶೌಚಾಲಯ ಮತ್ತು ಶುದ್ಧ ಕುಡಿಯುವ ನೀರಿಗಾಗಿ ಇಬ್ಬರು ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡಿದ್ದಾರೆ. ಈ ಸಿಬ್ಬಂದಿಗೆ ವಿಧಾನಪರಿಷತ್ ಸದಸ್ಯ



ವೈ.ಎಂ. ಸತೀಶ್ ಅವರು ವೈಯಕ್ತಿಕವಾಗಿ ಗೌರವಧನ ಮತ್ತು ಸ್ವಚ್ಛತಾ ಸಾಮಗ್ರಿಗಳು – ಸಲಕರಣೆಗಳನ್ನು ನೀಡುತ್ತಿದ್ದಾರೆ.

ವೈ.ಎಂ. ಸತೀಶ್ ಅವರು, 'ಮೋದಿ@20 ಪುಸ್ತಕವನ್ನು ಓದಿ, ಗುಜರಾತ್ ಮುಖ್ಯಮಂತ್ರಿಯಾಗಿದ್ದಾಗ ನರೇಂದ್ರಮೋದಿ ಅವರು ಭೂಕಂಪ ಪೀಡಿತ ಪ್ರದೇಶದಲ್ಲಿ ಸ್ವಯಂಸೇವಕರು, ಯುವಶಕ್ತಿ, ಸರ್ಕಾರ ಒಟ್ಟಾಗಿ ತ್ವರಿತವಾಗಿ ಆ ಪ್ರದೇಶವನ್ನು ಪುನರ್ ಸಂಘಟನೆ ಮಾಡಿದ್ದು ನನಗೆ ಸ್ಫೂರ್ತಿ ನೀಡಿದೆ.

ಈ ಪುಸ್ತಕದಲ್ಲಿಯ ಅನೇಕ ವಿಚಾರಗಳಿಂದ ನಾನು, ಪ್ರೇರೇಪಿತನಾಗಿ ಸರ್ಕಾರಿ ಶಾಲೆಗಳಲ್ಲಿಯ ಶೌಚಾಲಯಗಳ ನಿರ್ವಹಣೆ, ಶುದ್ಧವಾದ ಕುಡಿಯುವ ನೀರನ್ನು ವಿದ್ಯಾರ್ಥಿಗಳಿಗೆ ನೀಡಲು ಬದ್ಧನಾಗಿರುವೆ' ಎಂದು ಸುದ್ದಿಗಾರರಿಗೆ ವಿವರಿಸಿದರು.ಪಾರ್ವತಿನಗರ ಎರಡನೇ ಕ್ರಾಸ್ ಸರ್ಕಾರಿ ಮಾದರಿ ಶಾಲೆಯಲ್ಲಿ ಕೊಳವೆಬಾವಿಯನ್ನು ಕೊರೆಯಿಸಿ, ಮೋಟಾರ್ ಅಳವಡಿಸಿ ವಿದ್ಯುದೀಕರಣ ಮತ್ತು ಒಳಚಂಡಿ ವ್ಯವಸ್ಥೆಯನ್ನು ದುರಸ್ತಿಗೊಳಿಸಲಾಗಿದೆ. ಪಟೇಲ್‌ನಗರ ಸರ್ಕಾರಿ ಶಾಲೆಯಲ್ಲಿ ಕೊಳವೆಬಾವಿಯನ್ನು ಪುನರುಜ್ಜೀವಗೊಳಿಸಿ, ಪೈಪ್‌ಲೈನ್ ಅಳವಡಿಸಿ ಆರ್‌ಓ ಫಿಲ್ಟರ್ ಅನ್ನು ಬಳಕೆಗೆ ಸಜ್ಜುಗೊಳಿಸಲಾಗಿದೆ. ಸರ್ಕಾರಿ ಬಾಲಕಿಯ ಶಾಲೆಯಲ್ಲಿ ಆರ್‌ಓ ಫಿಲ್ಟರ್ ಮತ್ತು ಒಳಚರಂಡಿ ಪೈಪ್‌ಲೈನ್ ದುರಸ್ತಿಗೊಳಿಸಿ ಬಳಕೆಗೆ ಅರ್ಹಗೊಳಿಸಲಾಗಿದೆ.ಬಳ್ಳಾರಿ ಪೂರ್ವವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಕೆಂಪಯ್ಯ ಅವರು, 'ಎನ್‌ಜಿಓಗಳು ಮತ್ತು ಮುನಿಸಿಪಲ್ ಸಿಬ್ಬಂದಿಯಿಂದ ಈ ಕೆಲಸವನ್ನು ನಡೆಸಬೇಕಿದ್ದ ಕೆಲಸವನ್ನು ಶಾಸಕ ವೈ.ಎಂ. ಸತೀಶ್ ಅವರು ಜನಪ್ರತಿನಿಧಿಗಳಿಗೆ ಮಾದರಿಯಾಗಿ ಸರ್ಕಾರಿ ಶಾಲೆಗಳ ಶೌಚಾಲಯಗಳ ಸ್ವಚ್ಛತೆ, ದುರಸ್ತಿ, ಶುದ್ಧವಾದ ಕುಡಿಯುವ ನೀರು ಪೂರೈಸುವ ಜವಾಬ್ದಾರಿಗಳನ್ನು ಕೈಗೆತ್ತಿಕೊಂಡಿದ್ದಾರೆ.

ಶಿಕ್ಷಣ, ಆರೋಗ್ಯ, ಸ್ವಚ್ಛತೆ ಮತ್ತು ನೈರ್ಮಲ್ಯಕ್ಕೆ ಅವರು ನೀಡಿರುವ ಆದ್ಯತೆ ಶ್ಲಾಘನೀಯ' ಎಂದರು. ಪಟೇಲ್‌ನಗರ ಸರ್ಕಾರಿ ಶಾಲೆಯ ಮುಖ್ಯೋಪಾಧ್ಯಾಯಿನಿ ವಿಜಯಲಕ್ಷ್ಮಿ ಮತ್ತು ತೆಲುಗು ಶಿಕ್ಷಕ ಎನ್. ಮಧುಸೂಧನ್‌ರೆಡ್ಡಿ ಅವರು, 'ಪ್ರತಿ ನಿತ್ಯ ಒಬ್ಬ ಸಿಬ್ಬಂದಿ ಶಾಲೆಯಲ್ಲಿ ಶೌಚಾಲಯವನ್ನು ಸ್ವಚ್ಛ ಮಾಡುತ್ತಿದ್ದಾರೆ. ಶೌಚಾಲಯ ಸ್ವಚ್ಛಗೊಳ್ಳುತ್ತಿದೆ. ಎಂಎಲ್‌ಸಿ ವೈ.ಎಂ. ಸತೀಶ್ ಅವರ ಸೇವೆ ಸ್ವಾಗತಾರ್ಹ' ಎಂದರು. ಸರ್ಕಾರಿ ಶಾಲೆಯ ವಿದ್ಯಾರ್ಥಿನಿಯರು 'ನಮ್ಮ ಶಾಲೆಯಲ್ಲಿ ಸರಿಯಾಗಿ ಶೌಚಾಲಯ ನಿರ್ವಹಣೆ ಆಗುತ್ತಿರಲಿಲ್ಲ. ಶಾಸಕ ವೈ.ಎಂ. ಸತೀಶ್ ಅವರಿಂದಾಗಿ ನಮ್ಮ ಶಾಲೆಯ ಶೌಚಾಲಯ ಪ್ರತಿನಿತ್ಯವೂ ಸ್ವಚ್ಛವಾಗುತ್ತಿದೆ. ಶುದ್ಧವಾದ ಕುಡಿಯುವ ನೀರು ಸಿಗುತ್ತಿವೆ. ನಿಮ್ಮ ಸೇವೆಗೆ ಸದಾ ನಾವು ಚಿರಋಣಿಯಾಗಿದ್ದೇವೆ ಎಂದು ತಿಳಿಸಿದ್ದಾರೆ.

## ಮಹಾನಗರ ಪಾಲಿಕೆಯ ಮಹಾಪೌರ ಹಾಗೂ ಉಪಮಹಾಪೌರರ ಸ್ಥಾನಗಳಿಗೆ ಚುನಾವಣೆ

ಬೆಳಗಾವಿ : ಮಹಾನಗರ ಪಾಲಿಕೆಯ 21 ನೇ ಅವಧಿಗೆ ಮಹಾಪೌರ ಹಾಗೂ ಉಪಮಹಾಪೌರರ ಸ್ಥಾನಗಳಿಗೆ ಚುನಾವಣೆಯನ್ನು ನಿಗದಿಪಡಿಸಲಾಗಿದ್ದು, ಫೆಬ್ರುವರಿ 6, 2023 ರಂದು ಮಧ್ಯಾಹ್ನ 3 ಗಂಟೆಗೆ ಬೆಳಗಾವಿಯ ಮಹಾನಗರ ಪಾಲಿಕೆ ಸಭಾಗೃಹದಲ್ಲಿ ಚುನಾವಣೆ ನಡೆಯಲಿದೆ.

ಮಹಾಪೌರರ ಸ್ಥಾನವು ಸಾಮಾನ್ಯ ಮಹಿಳೆಯರಿಗೆ ಹಾಗೂ ಉಪಮಹಾಪೌರ ಸ್ಥಾನವು ಹಿಂದುಳಿದ ವರ್ಗ–ಬ ಮಹಿಳೆಯರಿಗೆ ಮೀಸಲಾಗಿದೆ.

**ಚುಣಾವಣೆ ವೇಳಾಪಟ್ಟಿ:**

ಫೆಬ್ರುವರಿ 6, 2023 ರಂದು ಮುಂಜಾನೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಮಹಾಪೌರ, ಉಪಮಹಾಪೌರ ಸ್ಥಾನಗಳಿಗೆ ನಾಮಪತ್ರಗಳನ್ನು ಸ್ವೀಕರಿಸಲಾಗುವುದು. ಮಧ್ಯಾಹ್ನ 3 ಗಂಟೆಗೆ ಸಭೆ ಪ್ರಾರಂಭವಾಗುವುದು.

ಮಧ್ಯಾಹ್ನ 3 ಗಂಟೆಯ ನಂತರ ಮಹಾಪೌರ, ಉಪಮಹಾಪೌರ ಸ್ಥಾನಕ್ಕೆ ಚುನಾವಣೆ ಪ್ರಾರಂಭವಾಗಲಿದ್ದು, ನಾಮಪತ್ರಗಳ ಪರಿಶೀಲನೆ, ಕ್ರಮಬದ್ಧ ನಾಮಪತ್ರಗಳ ಘೋಷಣೆ, ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳುವುದು, ಉಮೇದುವಾರರ ಪಟ್ಟಿ ಘೋಷಣೆ, ಅವಿರೋಧ ಆಯ್ಕೆಯಾದಲ್ಲಿ ಫಲಿತಾಂಶ ಘೋಷಣೆ, ಚುನಾವಣೆ ಅಗತ್ಯವಿದ್ದಲ್ಲಿ ಕೈ ಎತ್ತುವ ಮೂಲಕ ಮತದಾನ, ನಡವಳಿಕೆ ಪುಸ್ತಕದಲ್ಲಿ ಸದಸ್ಯರ ಸಹಿ ದಾಖಲಿಸುವುದು, ಹಾಗೂ ಮತಗಳ ಎಣಿಕೆ ಮತ್ತು ಫಲಿತಾಂಶ ಘೋಷಣೆ ಮಾಡಲಾಗುವುದು ಎಂದು ಅಧ್ಯಕ್ಷಾಧಿಕಾರಿಗಳು, ಮಹಾನಗರ ಪಾಲಿಕೆ(ಚುನಾವಣೆ) ಹಾಗೂ ಪ್ರಾದೇಶಿಕ ಆಯುಕ್ತರಾದ ಎಂ.ಜಿ. ಹಿರೇಮಠ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಳ್ಳಾರಿ : ಬಳ್ಳಾರಿ ನಗರದ ಸಂಗನಕಲ್ ರಸ್ತೆಯಲ್ಲಿರುವ ಶೃಂಗೇರಿ ಶ್ರೀ ಶಾರದಾಂಬ ಮಠಕ್ಕೆ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಅಧಿನಾಯಕಿ ಲಕ್ಷ್ಮಿ ಅರುಣಾ ಜನಾರ್ಧನ್ ರೆಡ್ಡಿ ಅವರ ಭೇಟಿನೀಡಿ, ನೂತನವಾಗಿ ನಿರ್ಮಿಸಲಾಗುವ ಮಠದ ಶಂಕುಸ್ಥಾಪನೆ, ಭೂಮಿಪೂಜೆ ಮಾಡುವ ಮುಖಾಂತರ ನೆರವೇರಿಸಿದರು. ಈ ಸಂಧರ್ಬದಲ್ಲಿ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

# ಗಾಂಧಿಜೀಯ ಆದರ್ಶಗಳು ಇಂದಿಗೂ ಪ್ರಸ್ತುತ

ಬಳ್ಳಾರಿ : ಗಾಂಧಿಜೀಯವರ ಸತ್ಯ ಮತ್ತು ಅಹಿಂಸೆ ಸಿದ್ಧಾಂತ ಭಾರತಕ್ಕೆ ಮಾತ್ರ ಸೀಮಿತವಾಗಿಲ್ಲ. ಅವರ ಬೋಧನೆಗಳನ್ನು ಪ್ರಪಂಚದಾದ್ಯಂತ ಅನುಸರಿಸಲಾಗುತ್ತಿದೆ ಎಂದು ವಿಶ್ವ ವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ. ರಮೇಶ್ ಓಲೇಕಾರ ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ 'ರಾಷ್ಟ್ರಪಿತ ಮೋಹನದಾಸ್ ಕರಮಚಂದ್ ಗಾಂಧಿಜೀಯವರ ಹುತಾತ್ಮ ದಿನಾಚರಣೆ'ಯ ಪ್ರಯುಕ್ತ ವಿದ್ಯಾರ್ಥಿ ಕಲ್ಯಾಣ ಘಟಕದವತಿಯಿಂದ ಸೋಮವಾರ ಆಯೋಜಿಸಿದ್ದ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ದೇಶದ ಸ್ವಾತಂತ್ರಕ್ಕಾಗಿ ಅನುಸರಿಸಿದ ಅಹಿಂಸಾ ತತ್ವ ಇಂದಿಗೂ ಪ್ರಸ್ತುತವಾಗಿದೆ. ಗಾಂಧಿಜೀಯವರ ಜೀವನ ಅವರ ನಾಯಕತ್ವ–ಕ್ಕೆ ಸ್ಫೂರ್ತಿಯಾಗಿದೆ. ಗಾಂಧಿಜೀ ಮತ್ತು ವಿವೇಕಾನಂದರ ತತ್ವ, ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ ಎಂದು ಹೇಳಿದರು.

ಇಂಗ್ಲೀಷ್ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ರಾಬರ್ಟ್ ಜೋಸ್ ಮಾತನಾಡಿ, ನಮ್ಮ ಪ್ರಾಚೀನ ನಾಗರಿಕತೆಗಳಲ್ಲಿ ಹುತಾತ್ಮರ ದಿನದ ಪರಿಕಲ್ಪನೆ ಕಂಡು ಬರುತ್ತದೆ. ಗಾಂಧಿಜೀಯವರಿಗೆ ಅಹಿಂಸೆಯೆ ಜೀವನಶೈಲಿಯಾಗಿತ್ತು. ಇಂದು ಪ್ರಪಂಚದಾದ್ಯಂತ ಹಿಂಸಾ ಪ್ರವೃತ್ತಿಯನ್ನು ಕಾಣುತ್ತಿದ್ದೇವೆ. ಇಂತಹ



ಪ್ರವೃತ್ತಿಗಳಿಂದ ನಮ್ಮ ಸಂಸ್ಕೃತಿಗಳು ಹಾಳಾಗುತ್ತಿವೆ. ಗಾಂಧಿಜೀಯವರ ತತ್ವ ಆದರ್ಶಗಳನ್ನು ಪುನರಾವರ್ತನೆ ಮಾಡಿಕೊಳ್ಳಬೇಕಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವಿದ್ಯಾರ್ಥಿ ಕಲ್ಯಾಣ ಘಟಕದ ನಿರ್ದೇಶಕರಾದ ಪ್ರೊ. ಜಿ.ಪಿ. ದಿನೇಶ್, ದೈಹಿಕ ಶಿಕ್ಷಣ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಶಶಿಧರ ಕೆಲ್ಲೂರ್, ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜ–ಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

## 6ನೇ ತರಗತಿ ವಸತಿ ಶಾಲೆಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: 2023–2024 ನೇ ಸಾಲಿಗ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಬೆಳಗಾವಿ ಜಿಲ್ಲೆಯಲ್ಲಿ ಮೊರರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಇತರೆ ವಸತಿ ಶಾಲೆಗಳ 6ನೇ ತರಗತಿಯ ದಾಖಲಾತಿಗಾಗಿ ಮಾರ್ಚ್ 12, 2023 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ವರೆಗೆ ಪರೀಕ್ಷೆ ನಡೆಯಲಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ವತಿಯಿಂದ ಪ್ರವೇಶ ಪರೀಕ್ಷೆ ಮತ್ತು ಆನ್‌ಲೈನ್ ಕೌನ್ಸಿಲಿಂಗ್ ನಡೆಸಲಾಗುವುದು. ಪ್ರಸ್ತುತ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪಾಲಕರು/ಪೋಷಕರು ತಮ್ಮ ಮಕ್ಕಳನ್ನು 6ನೇ ತರಗತಿಗೆ ವಸತಿ ಶಾಲೆಗಳಿಗೆ ದಾಖಲಿಸಲು ಜನವರಿ 5, 2023 ರಿಂದ ಜನವರಿ 22 ರವರೆಗೆ ಅವಶ್ಯಕ ದಾಖಲಾತಿಗಳೊಂದಿಗೆ ತಮ್ಮ ಹತ್ತಿರದ ವಸತಿ ಶಾಲೆಗಳ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಆರ್‌ಪಿಪಿ ಪಕ್ಷಕ್ಕೆ ಸೇರ್ಪಡೆ



ಬಳ್ಳಾರಿ : ಗಂಗಾವತಿ ನಗರದಲ್ಲಿ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಸಂಸ್ಥಾಪಕ ಗಾಲಿ ಜನಾರ್ಧನ ರೆಡ್ಡಿಯವರ ಸಮ್ಮುಖದಲ್ಲಿ ನಗರಸಭೆ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ಅಮರಜ್ಯೋತಿ ನರಸಪ್ಪ, ರಾಮಾನಾಯ್ಕ್ ಅವರೊಂದಿಗೆ ಕಾಂಗ್ರೆಸ್ ಮತ್ತು ಬಿಜೆಪಿಯ ಪಕ್ಷಗಳಿಂದ ಮಾಜಿ ನಗರಸಭೆ ಸದಸ್ಯರು, ಹಲವು ಸಮಾಜದ ಮುಖಂಡರು ಸಮೇತ ನೂರಾರು ಕಾರ್ಯಕರ್ತರು ಕಲ್ಯಾಣ ರಾಜ್ಯ ಪ್ರಗತಿ ಪಕ್ಷ ಸೇರ್ಪಡೆಯಾದರು.

ಮಾಜಿ ಸಿಎಂಸಿ ಅಧ್ಯಕ್ಷರಾದ ಪಂಪಣ್ಣ ನಾಯಕ್, ಪುತ್ತೂರು ಶ್ರೀನಿವಾಸ್, ಈ.ರಾಮಕೃಷ್ಣ, ಸೈಯದ್ ಇಬ್ರಾಹಿಂ, ಬಿ.ನಾಗರಾಜ, ಬಲಿಜ ಸಮಾಜದ ಅಧ್ಯಕ್ಷ ಟಿ.ಜಿ.ಬಾಬು ಆನೆಗುಂದಿ, ಮಲ್ಲಪ್ಪ ಸಜ್ಜನ್, ಮಹಮ್ಮದ್ ಚಾವೂಸ್, ಶಿವಣ್ಣ, ಮಂಜುನಾಥ ವಲ್ಕಮ್ ದಿನ್ನಿ, ವಿಶ್ವಕರ್ಮ ಸಮಾಜದ ವಿಜಯಕುಮಾರ್, ಸೈಯದ್ ಅಲಿ, ಉಪ್ಪಾರ ಸಮಾಜದ ಮುಕ್ಕಣ್ಣ, ಕೆ.ಯಂಕೋಬಿ, ಚಳ್ಳಾರಿ ಕೃಷ್ಣ, ನಾರಾಯಣಪ್ಪ ಎಮ್ಮಿ, ಶ್ರೀಧರ ಇಂಗಳಗಿ, ನಂದಾಪುರ್ ಮಲ್ಲಿಕಾರ್ಜುನ, ಗೋವಿಂದಪ್ಪ ಹುಲಗಿ, ಗೋವಿಂದರಾಜ್, ರಾಘವೇಂದ್ರ ಎಫ್ ಚಲುವಾದಿ, ಹೀರೆಜಂತಕಲ್ ಜೊತೆಗೆ ಇನ್ನಿತರರು ಕಲ್ಯಾಣ ರಾಜ್ಯ ಪ್ರಗತಿ ಪಕ್ಷಕ್ಕೆ ಸೇರ್ಪಡೆಯಾದರು.

# ಜೋಡೋಯಾತ್ರೆಯ ಸಮಾರೋಪ ಸಮಾರಂಭದಲ್ಲಿ ಶಾಸಕ ಬಿ.ನಾಗೇಂದ್ರ ಭಾಗಿ



ಬಳ್ಳಾರಿ : ಕಳೆದ ಮೂರು ತಿಂಗಳಿಂದ ನಡೆಯುತ್ತಿರುವ ರಾಹುಲ್ ಗಾಂಧಿಯವರ ಐತಿಹಾಸಿಕ ಭಾರತ ಜೋಡೋ ಯಾತ್ರೆ ಅಂತಿಮ ಘಟ್ಟಕ್ಕೆ ತಲುಪಿದೆ. ಕನ್ಯಾಕುಮಾರಿಯಿಂದ ಆರಂಭವಾದ ಯಾತ್ರೆ ಜಮ್ಮು ಕಾಶ್ಮೀರ ತಲುಪಿದ್ದು ಈಗ ಸಮಾರೋಪ ಸಮಾರಂಭಕ್ಕೆ ಭರದ ಸಿದ್ದತೆಗಳು ನಡೆದ ಬೆನ್ನಲ್ಲೆ ಕರ್ನಾಟಕದಿಂದ ಪಕ್ಷದ ನಾಯಕ ಸಿದ್ದರಾಮಯ್ಯ ಅವರೊಂದಿಗೆ ಕಾಂಗ್ರೆಸ್ ನಾಯಕರು ದೆಹಲಿಯ ಕರ್ನಾಟಕ ಭವನದಲ್ಲಿ ಬೀಡು ಬಿಟ್ಟಿದ್ದಾರೆ.

ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ರಾಜ್ಯದ ಧೀಮಂತ ನಾಯಕ, ಮಾಜಿ ಮುಖ್ಯಮಂತ್ರಿ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅವರನ್ನು ಕರ್ನಾಟಕ ಭವನದಲ್ಲಿ ಪರಸ್ಪರ ಭೇಟಿಯಾಗಿ ಕೇಂದ್ರದ ನಾಯಕರೊಂದಿಗೆ ಹಾಗೂ ರಾಜ್ಯದ ನಾಯಕರೊಂದಿಗೆ ಹಲವು ಮಹತ್ತರ ರಾಜಕೀಯ ಬೆಳವಣಿಗಳ ಕುರಿತು ಚರ್ಚಿಸಿದರು.

ಈ ಸಂದರ್ಭದಲ್ಲಿ ಪ್ರಚಾರ ಸಮಿತಿ ಅಧ್ಯಕ್ಷ ಎಂ.ಬಿ ಪಾಟೀಲ್, ಪ್ರಕಾಶ್ ರಾಥೋಡ್, ವಿನಯ್ ಕುಲಕರ್ಣಿ, ರಾಘವೇಂದ್ರ ಹಿಟ್ನಾಳ್, ಅಶೋಕ್ ಪಟ್ಟಾ ಶೆಟ್ಟಿ ಸೇರಿದಂತೆ ಇನ್ನೂ ಅನೇಕ ನಾಯಕರು ಕರ್ನಾಟಕ ಭವನದಿಂದ ಜಮ್ಮುವಿಗೆ ವಿಮಾನದಲ್ಲಿ ಪ್ರಯಾಣ ಬೆಳೆಸಿದರು.

## ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ನೇಮಕಾತಿ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಖಾನಾಪೂರ ಮತ್ತು ರಾಯಬಾಗ ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ (ವ್ಹಿ,ಆರ್,ಡಬ್ಲ್ಯೂ) ಹುದ್ದೆಗಳ ನೇಮಕಾತಿಗಾಗಿ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆ ಅಡಿ ಮಾಸಿಕ 9000 ರೂಗಳ ಗೌರವಧನ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿಕಲಚೇತನ ಅಭ್ಯರ್ಥಿಗಳು ಫೆಬ್ರವರಿ 17, 2023 ರ ಸಂಜೆ 5 ಗಂಟೆಗಳ ಒಳಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ಕಾರ್ಯಾಲಯ ಖಾನಾಪೂರ ಮತ್ತು ರಾಯಬಾಗ ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಖಾನಾಪೂರ ತಾಲೂಕಿನ ನಾಗರಗಾಳಿ ಗ್ರಾಮ ಪಂಚಾಯಿತಿಯಲ್ಲಿ 1 ಹುದ್ದೆ ಖಾಲಿ ಇರುತ್ತದೆ. ರಾಯಬಾಗ ತಾಲೂಕಿನ ಬೆಕ್ಕೇರಿ(1), ಮೊರಬ(1) ಹಾಗೂ ಹುಬ್ಬರವಾಡಿ(1) ಗ್ರಾಮ ಪಂಚಾಯಿತಿಯಲ್ಲಿ ತಲಾ ಒಂದು ಹುದ್ದೆಗಳು ಖಾಲಿ ಇರುತ್ತವೆ.

**ಷರತ್ತುಗಳು:**

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ವಿಕಲಚೇತನರಾಗಿದ್ದು, ಶೇಕಡ 40 ರಷ್ಟು ವಿಕಲತೆ ಪ್ರಮಾಣ ಹೊಂದಿರತಕ್ಕದ್ದು, ಗ್ರಾಮ ಪಂಚಾಯತಿಗಳ ವ್ಯಾಪ್ತಿಗೊಳಪಟ್ಟಿರಬೇಕು. ಅರ್ಜಿದಾರರು ಕನಿಷ್ಠ ಎಸ್ಸೆಸ್ಸೆಲ್ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಮತ್ತು ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ ಫೆಬ್ರುವರಿ 17, 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಯೋಮಿತಿಯಲ್ಲಿರಬೇಕು.

ವಿಕಲಚೇತನ ಮಹಿಳಾ, ಪ. ಜಾತಿ ಮತ್ತು ಪ. ಪಂಗಡದ ಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಾಮಿ ವಿವೇಕಾನಂದರ ಆದರ್ಶ ಅಳವಡಿಸಿಕೊಳ್ಳಲು ಕರೆ

ಬಳ್ಳಾರಿ : ಸ್ವಾಮಿ ವಿವೇಕಾನಂದರ 160ನೇ ಜಯಂತೋತ್ಸವವನ್ನು ಇಲ್ಲಿನ ಬಸವೇಶ್ವರ ನಗರದ ಸನಾತನ ವೀರಶೈವ ಗುರುಕುಲ ಮಠದಲ್ಲಿ ಶ್ರೀ ಪಂಚಾಕ್ಷರಿ ಮಾರ್ಷಿಯಲ್ ಆರ್ಟ್ಸ್‌ಟ್ರಸ್ಟ್‌ನ 10ನೇ ವಾರ್ಷಿಕೋತ್ಸವದ ಅಂಗವಾಗಿ ಒಂದು ದಿನದ ಇಂಟರ್ ಡೋಜ್ ಕರಾಟೆ ಸ್ಪರ್ಧೆ ಹಮ್ಮಿಕೊಂಡಿತ್ತು.

ಕಾರ್ಯಕ್ರಮದ ಸಾನಿಧ್ಯವನ್ನು ಜೆ.ಎಂ.ಪಂಪಾಪತಿ ಶಾಸ್ತ್ರಿಗಳು ವಹಿಸಿಕೊಂಡಿದ್ದರು. ಬುಡಾ ಅಧ್ಯಕ್ಷ ಎಸ್. ಮಾರುತಿ ಪ್ರಸಾದ್ ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟನೆ ಮಾಡಿದರು. ನಂತರ ಮಾತನಾಡಿದ ಅವರು, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಸ್ವಾಮಿ ವಿವೇಕಾನಂದರ



ಆದರ್ಶವನ್ನು ಅಳವಡಿಸಿಕೊಳ್ಳಬೇಕು. ಸ್ವಾಮಿ ವಿವೇಕಾನಂದರ ವ್ಯಕ್ತಿತ್ವಕ್ಕೆ ಇಡೀ ಪ್ರಪಂಚವೆ ಮಾರು ಹೋಗಿತ್ತು. ಅಂತೊಬ್ಬ ಯೋಗಿಗಳು ನಮ್ಮ ದೇಶದಲ್ಲಿ ಹುಟ್ಟಿರುವುದುರ ನಮ್ಮ ಭಾರತ ದೇಶದ ಪುಣ್ಯವೇ ಸರಿ, ಶ್ರೀ ಪಂಚಾಕ್ಷರಿ ಮಾರ್ಷಿಯಲ್ ಆರ್ಟ್ಸ್ ಟ್ರಸ್ಟ್ ಹಲವಾರು ವರ್ಷಗಳಿಂದ ಉಚಿತವಾಗಿ ಮಕ್ಕಗಳಿಗೆ, ಕರಾಟೆ ಯೋಗ, ಧ್ಯಾನ್ಯ ಮತ್ತು ಉತ್ತಮ ಸಂಸ್ಕಾರವನ್ನು ನೀಡುತ್ತಿದ್ದು, ಅವರ ಸಾಮಾಜಿಕ ಸೇವೆಯನ್ನು ನೋಡಿ ಬಳ್ಳಾರಿ ಬುಡಾದಿಂದ ಸರ್ಕಾರ ನಿಗಧಿ ಪಡಿಸಿದ ಧರದಲ್ಲಿ ನಿವೇಶನ ನೀಡಿದ್ದೇವೆಂದು ಹೇಳಲು ಸಂತೋಷವಾಗುತ್ತದೆ. ಮುಂದಿನ ದಿನಮಾನದಲ್ಲಿ ಕೂಡಾ ಟ್ರಸ್ಟ್‌ಗೆ ಬುಡಾದಿಂದ ಎಲ್ಲಾ ಸಹಕಾರವನ್ನು ನೀಡಲಾಗುವುದೆಂದರು.

ಕಾರ್ಯಕ್ರಮದಲ್ಲಿ ಕರಾಟೆಯಲ್ಲಿ ವಿಶೇಷ ಸಾಧನೆ ಮಾಡಿದ ಅಮನ್‌ರಾಜ್, ರಾಖೇಶ್, ಮಾನಸ, ಟಿ.ಅರ್ಜುನ್‌ರೆಡ್ಡಿ ಅವರನ್ನು ಸನ್ಮಾನಿಸಲಾಯಿತು.ಮುಖ್ಯ ಅತಿಥಿಗಳಾಗಿ ಆಗಮಿಸಿದ ಧಾನಿ ಮಸೀದಿಪುರ ಸಿದ್ದರಾಮನಗೌಡ ಟ್ರಸ್ಟ್‌ಗೆ ಕಟ್ಟಡ ಕಟ್ಟಲು 50 ಸಾವಿರ ಧನ ಸಹಾಯ ನೀಡುವುದಾಗಿ ವಾಗ್ದಾನ ನೀಡಿದರು, ಪ್ರಾಸ್ತವಿಕವಾಗಿ ಟ್ರಸ್ಟ್ನ ಅಧ್ಯಕ್ಷರ ಬಂಡ್ರಾಳ್ ಎಂ.ಮೃತ್ಯುಂಜಯಸ್ವಾಮಿ ಮಾತನಾಡಿ, ಟ್ರಸ್ಟ್‌ಗೆ ನೀಡಿದ ಬುಡಾ ನಿವೇಶನದಲ್ಲಿ ಕಟ್ಟಡ ನಿರ್ಮಿಸಲು ಎಲ್ಲಾ ಧಾನಿಗಳು ಮತ್ತು ನಗರದ ಗಣ್ಯಮಾನ್ಯರು ಸಹಕಾರ ನೀಡಬೇಕೆಂದು ಕೋರಿದರು.ಬಿಜೆಪಿ ಮುಖಂಡರಾದ ಕೆ.ಎ. ರಾಮಲಿಂಗಪ್ಪ, ವೀರಶೇಖರ್‌ರೆಡ್ಡಿ, ಅನಿಲ್‌ನಾಯ್ಡು, ಸುರೇಖ ಮಲ್ಲನಗೌಡ, ಹಾಗು ಬಿ.ಕೆ.ನಾಗರಾಜ, ಶಿವಕುಮಾರ್ ಮಾಳಾಗಿ, ವಿಕ್ರಮ್ ಮಹಿಪಾಲ್, ಶಬರಿ ರವಿಚಂದ್ರನ್ ಮುಂತಾದವರು ಭಾಗವಹಿಸಿದ್ದರು.

ಕರಾಟೆ ಸ್ಪರ್ಧೆಯ ಮುಖ್ಯಸ್ಥರಾಗಿ ಹನ್ನಿ ಅನ್ನಪ್ಪ ಮಾರ್ಕಲ್ ವಹಿಸಿಕೊಂಡಿದ್ದರು. ಟ್ರಸ್ಟ್ ನ 250ಕ್ಕೂ ಹೆಚ್ಚು ವಿದ್ಯಾರ್ಥಿಗಳು ಇದರಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಕೊಟ್ರೇಶ್ವಿದ್ಯಾರ್ಥಿನಿ, ದೀಕ್ಷಾ ಸ್ವಾಮಿ ಪ್ರಾರ್ಥನೆ ನಡೆಸಿಕೊಟ್ಟರು.

## ನಂದಗಡ ಸಂಗೊಳ್ಳಿ ರಾಯಣ್ಣ ಸ್ಮಾರಕ ಸನಿವಾಸ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಬೆಳಗಾವಿ : ಖಾನಾಪುರ ತಾಲ್ಲೂಕಿನ ನಂದಗಡದಲ್ಲಿರುವ ಸಂಗೊಳ್ಳಿ ರಾಯಣ್ಣ ಸ್ಮಾರಕ ಸನಿವಾಸ ಶಾಲೆಯಲ್ಲಿ 2023–24ನೇ ಸಾಲಿಗೆ 8 ನೇ ತರಗತಿ ಇಂಗ್ಲಿಷ್ ಮಾಧ್ಯಮ ವಿಭಾಗಕ್ಕೆ ಪ್ರವೇಶ ಪರೀ–ಕ್ಷೆ ನಡೆಸಲಾಗುತ್ತಿದ್ದು, ಆಸಕ್ತ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಬೆಳಗಾವಿ ವಿಭಾಗದ ಧಾರವಾಡ, ಬೆಳಗಾವಿ, ವಿಜಯಪುರ, ಬಾಗಲಕೋಟ ಗದಗ, ಹಾವೇರಿ, ಹಾಗೂ ಕಾರವಾರ ಜಿಲ್ಲೆಗಳಲ್ಲಿ 7ನೇ ತರಗತಿಯಲ್ಲಿ ಓದುತ್ತಿರುವ ಆಸಕ್ತ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸಬಹುದು.

ಒಟ್ಟು 50 ಸೀಟುಗಳು ಲಭ್ಯವಿದ್ದು, ಶೇ.50 ರಷ್ಟು ಸಾಮಾನ್ಯ ವರ್ಗದವರಿಗೆ ಉಳಿದ ಶೇ.50 ರಲ್ಲಿ ಶೇ.25 ರಷ್ಟು ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರಿಗೆ ಇನ್ನುಳಿದ ಶೇ.25 ರಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಮೀಸಲಿವೆ. ಈ ಎಲ್ಲ ವರ್ಗಗಳಲ್ಲಿ ಶೇ. 50 ರಷ್ಟು ಸೀಟುಗಳು ಬಾಲಕಿಯರಿಗೆ ಮೀಸಲಿವೆ.

ಆಯ್ಕೆಯಾದ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ ಹಾಗೂ ಶಿಕ್ಷಣ ನೀಡಲಾಗುವುದು.

ಅರ್ಜಿ ಸಲ್ಲಿಸಲು ಶಾಲೆಯ ವೆಬ್‌ಸೈಟ್ (https://srmrsndg.weebly.com/) ಮೂಲಕ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ಫೆಬ್ರವರಿ 5, 2023 ರ ಒಳಗೆ ಪ್ರವೇಶಪತ್ರ ರವಾನೆಗಾಗಿ 5 ರೂ ಮೌಲ್ಯದ ಸ್ವಯಂ ವಿಳಾಸವುಳ್ಳ ಎರಡು ಅಂಚೆ ಲಕೋಟೆಯನ್ನು ಕಡ್ಡಾಯವಾಗಿ ಲಗತ್ತಿಸಿ, ನೇರವಾಗಿ "ಪ್ರಾಂಶುಪಾಲರು, ಸಂಗೊಳ್ಳಿ ರಾಯಣ್ಣ ಸ್ಮಾರಕ ಸನಿವಾಸ ಶಾಲೆ, ನಂದಗಡ, ತಾ: ಖಾನಾಪುರ ಜಿ: ಬೆಳಗಾವಿ–591120" ಈ ವಿಳಾಸಕ್ಕೆ ಪೋಸ್ಟ್ ಮೂಲಕ ಕಳಿಸಬೇಕು ಎಂದು ಬೆಳಗಾವಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಗದೇವ ಅಧಿಕಾರ ಸ್ವೀಕಾರ





ಬಳ್ಳಾರಿ: ಲೋಕೋಪಯೋಗಿ ಇಲಾಖೆಯ ಬಳ್ಳಾರಿ ಉಪ–ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರಾಗಿದ್ದ ಡಿ. ವೆಂಕಟರಮಣ ಎತ್ತಂಗಡಿಯಾಗಿದ್ದಾರೆ.

ಈ ಹಿಂದೆಯೇ ಇವರಿಗೆ ವರ್ಗಾವಣೆ ಮಾಡಲಾಗಿತ್ತು. ಆದರೆ ವೆಂಕಟರಮಣ ಎರಡು ವರ್ಷ ಪೂರ್ತಿಯಾಗಿಲ್ಲ ಎಂದು ಕೆಎಟಿ(ಕರ್ನಾಟಕ ಆಡಳಿತ ನ್ಯಾಯ ಮಂಡಳಿ)ಯಿಂದ ತಡೆಯಾಜ್ಞ ತಂದು ಎರಡು ವರ್ಷ ಪೂರ್ಣಗೊಳಿಸಿ ಈಗ ವರ್ಗಾವಣೆಯಾಗಿದ್ದಾರೆ.


ಈ ಸ್ಥಳಕ್ಕೆ ಈ ಹಿಂದೆ 2016 ರಲ್ಲಿದ್ದ ಕಾರ್ಯನಿರ್ವಹಿಸಿದ ವಿ.ನಾಗದೇವ ಈಗ ಪುನಃ ಕಾರ್ಯನಿರ್ವಾಹಕ ಅಭಿಯಂತರರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

# ರಾಯಲ್ ಕಾಲೋನಿಯಲ್ಲಿ ಪೊಲೀಸ್ ಜನ ಸಂಪರ್ಕ ಸಭೆ

ಬಳ್ಳಾರಿ : ಕನ್ನಡ ಚೈತನ್ಯ ವೇದಿಕೆ ಹಾಗೂ ಗಾಂಧಿನಗರ ಪೊಲೀಸ್ ಠಾಣೆ ಸಹಯೋಗದೊಂದಿಗೆ ನೀವು ನಿಮ್ಮೊಂದಿಗೆ ನಾವು (ಪೊಲೀಸ್ ಜನ ಸಂಪರ್ಕ) ಸಭೆ ಕಾರ್ಯಕ್ರಮವು ಭಾನುವಾರ ಸಂಜೆ ನಗರದ ರಾಯಲ್ ಕಾಲೋನಿಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಗಾಂಧಿನಗರ ಪೊಲೀಸ್ ಠಾಣೆಯ ಇನ್ಸ್‌ಸ್ಪೆಕ್ಟರ್ ಸಿದ್ದರಾಮೇಶ್ವರ ಗಡೇದ ಮಾತನಾಡಿ, ಜನರು ಪೊಲೀಸರಿಂದ ಹೇಗೆ ರಕ್ಷಣೆಯನ್ನು ಪಡೆದುಕೊಳ್ಳಬಹುದು. ಅದೇ ರೀತಿ ಕಳ್ಳರಿಂದ ತಮ್ಮನ ತಾವು ಹೇಗೆ ರಕ್ಷಿಸಿಕೊಳ್ಳಬಹುದು ಎಂಬುವುದರ ಕುರಿತು ಸಂಕ್ಷಿಪ್ತವಾಗಿ ಜನತೆಗೆ ತಿಳಿಸಿದರು.

ಜೊತೆಗೆ ಕಾಲೋನಿಯ ನಿವಾಸಿಗಳಾದ ಜ್ಯೋತಿ ಪ್ರಕಾಶ್, ಸುಮಾರೆಡ್ಡಿ, ಹರೀಶ್, ಕೃಷ್ಣ, ಅಶೋಕ್, ಮುರುಳಿ ಶಂಕರ್‌ಗೌಡ, ಶಬ್ಬು, ಸಖಿನ, ಅನ್ನಪೂರ್ಣ, ಅಶ್ವಿನಿ, ಮೇಘನ ಜೋಶಿ ಇನ್ನೂ ಅನೇಕರು ಕೇಳಿದ ಪ್ರಶ್ನೆಗಳಿಗೆ ಉತ್ತರವನ್ನು ನೀಡುವ ಮೂಲಕ ಪೊಲೀಸರಿಗೆ ಗುಪ್ತವಾಗಿ



ಮಾಹಿತಿಯನ್ನು ಹೇಗೆ ನೀಡಬೇಕೆಂಬ ಬಗ್ಗೆ ಜನತೆಗೆ ತಿಳಿಸಿದರು. ಇದೇ ಸಂದರ್ಭದಲ್ಲಿ ಗಾಂಧಿನಗರ ಪೊಲೀಸ್ ಠಾಣೆ ಸಿಬ್ಬಂದಿಗಳು ಹಾಗೂ ಕಾಲೋನಿಯ ನಾಗರಿಕರು ಭಾಗವಹಿಸಿದ್ದರು. ವೇದಿಕೆಯಲ್ಲಿ ಗಾಂಧಿನಗರ ಪೊಲೀಸ್ ಠಾಣೆಯ ಇನ್ಸ್‌ಸ್ಪೆಕ್ಟರ್ ಸಿದ್ದರಾಮೇಶ್ವರ ಗಡೇದ, ಕನ್ನಡ ಚೈತನ್ಯ ವೇದಿಕೆ ಅಧ್ಯಕ್ಷ ಬಿ.ಎಸ್.ಪ್ರಭುಕುಮಾರ್, ಉಪಾಧ್ಯಕ್ಷ ಪಿ.ರಘುರಾಮ್, ಕಾಲೋನಿಯ ಹಿರಿಯರಾದ ರಾಘವೇಂದ್ರ ಆಚಾರ್, ರಾಮ್‌ಮೂರ್ತಿ, ಸತೀಶ್ ಹಾಗೂ ಪ್ರಕಾಶ ಹೆಮ್ಮಾಡಿ ಉಪಸ್ಥಿತರಿದ್ದರು.

# ಇಂದಿನ ಯುವಪೀಳಿಗೆಗೆ ಹಳೆಗನ್ನಡ ಅಧ್ಯಯನ ಅಗತ್ಯ: ಡಾ. ಬಾಳಾಸಾಹೇಬ ಲೋಕಾಪೂರ

ಬೆಳಗಾವಿ : ಇಂದಿನ ಯುವಪೀಳಿಗೆಗೆ ಹಳೆಗನ್ನಡ ಭಾಷೆಯನ್ನು ಅರ್ಥೈಸುವ ಕೆಲಸ ಸಾಹಿತಿಗಳಿಂದ ಆಗಬೇಕಾಗಿದೆ . ಈ ನಿಟ್ಟಿನಲ್ಲಿ ಯುವಪೀಳಿಗೆ ಹಳೆಗನ್ನಡ ಅಧ್ಯಯನ ಮಾಡುವಂತಹ ವಾತಾವರಣ ನಿರ್ಮಿಸುವುದು ಇಂದಿನ ಅಗತ್ಯತೆ–ಯಾಗಿದೆ ಎಂದು ಹಿರಿಯ ಸಾಹಿತಿ ಡಾ. ಬಾಳಾಸಾಹೇಬ ಲೋಕಾಪೂರ ಅವರು ಹೇಳಿದರು.

ಬೆಳಗಾವಿಯ ಭರತೇಶ ಶಿಕ್ಷಣ ಸಂಸ್ಥೆಯ ವಜ್ರಮಹೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾದ ಎರಡು ದಿನಗಳ ಅಖಿಲ ಕರ್ನಾಟಕ ಜೈನ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದ ಸಮಾರೋಪ ಭಾಷಣದಲ್ಲಿ ಮಾತನಾಡಿದ ಅವರು, ಹಳೆಗನ್ನಡ ಇಲ್ಲದಿದ್ದರೆ ಕನ್ನಡ ಸಾಹಿತ್ಯ ಅಪೂರ್ಣವಾಗುತ್ತದೆ. ಹಾಗಾಗಿ ಇಂದಿನ ಯುವಕರಿಗೆ ಹಳೆಗನ್ನಡ ಪರಿಚಯಿಸಬೇಕಾಗಿದೆ ಎಂದು ಹೇಳಿದ ಅವರು,ಜೈನ ಸಾಹಿತ್ಯ ಶಾಸನಗಳನ್ನು ಆಧುನಿಕರಣ ಮಾಡಿ ಅವುಗಳಿಗೆ ಡಿಜಿಟಿಲಕರಣ ಮಾಡುವ ಕಾರ್ಯ ಭರತೇಶ ಶೀಕ್ಷಣ ಸಂಸ್ಥೆ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಸಮ್ಮೇಳನದ ಸರ್ವಾಧ್ಯಕ್ಷರಾದ ಡಾ. ಶಾಂತಿನಾಥ ದಿಬ್ಬದ ಅವರು ಮಾತನಾಡಿ, ಕರ್ನಾಟಕ ಜೈನ ಸಾಹಿತ್ಯ ಸಮ್ಮೇಳನ ಪ್ರತಿ ವರ್ಷ ನಡೆಯಬೇಕಾಗಿದೆ. ಈ ಹಿನ್ನಲೆಯಲ್ಲಿ ಈಗ ನಡೆದ ಸಮ್ಮೇಳನದ ಒಂದು ಭಾಗವಾವಿ ಕರ್ನಾಟಕ ಜೈನ ಸಾಹಿತ್ಯ ಪರಿಷತ್ತನ್ನು ಸ್ಥಾಪಿಸುವುದು ಅತ್ಯಂತ ಅವಶ್ಯಕವಾಗಿದೆ. ಈ ಕಾರ್ಯ ಇಂದಿನಿಂದಲೇ ಪ್ರಾರಂಭವಾಗಬೇಕೆಂಬ ಒಂದು ಅಂಶದ ಗೊತ್ತುವಳಿಯನ್ನು ಈ ಸಮ್ಮೇಳನದಲ್ಲಿ ಕೈಗೊಳ್ಳಲಾಗುವುದು ಎಂದು




ಅವರು ತಿಳಿಸಿದರು.

ಇಂದು ಅನೇಕ ಕವಿತೆಗಳು ರಚನೆಯಾಗುತ್ತಿವೆ. ಚುಟುಕು ಕಾವ್ಯ ಸೇರಿದಂತೆ ಕವಿತೆ ಬರೆಯುವವರೆಲ್ಲರೂ ಸಹ ಕವಿಗಳೆ. ಒಬ್ಬ ಒಳ್ಳೆಯ ಕವಿಯ ಬಳಿ ವಸ್ತುಸ್ಥಿತಿಯ ಆಧಾರದ ಮೇಲೆ ಕವಿತೆ ರಚಿಸಬೇಕಾದರೆ ಅವನಗೆ ತಿಡಕಾಡುವ ಪರಿಸ್ಥಿತಿ ಬರುವುದಿಲ್ಲ.

ಸಾಹಿತ್ಯವನ್ನು ಅಧ್ಯಯನ ಮಾಡಿದವರು ಒಳ್ಳೆಯ ಕವಿತೆಯನ್ನು ರಚಿಸಬಹುದು ಎಂದರು.

ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಡಾ. ಬಾಳಣ್ಣಾ ಶೀಗಹಳ್ಳಿ ಅವರು , ಜೈನ ಸಾಹಿತ್ಯ ಕನ್ನಡ ಸಾರಸ್ವತದ ಅತ್ಯುನ್ನತ ಸಾಹಿತ್ಯವಾಗಿದೆ. ಜೈನ ಸಾಹಿತ್ಯ ಅಂದರೆ ಅದು ಕೇವಲ ಜೈನರಿಗಾಗಿ ರಚಿಸಿದ ಸಾಹಿತ್ಯ ಅಲ್ಲ. ಎಲ್ಲ ಧರ್ಮ, ಜಾತಿ ಮತ್ತು ಮಾನವ ಕುಲದ ಕಲ್ಯಾಣಕ್ಕಾಗಿ ರಚಿಸಿದ ಸಾಹಿತ್ಯವಾಗಿದೆ ಎಂದು ಅವರು ಹೇಳಿದರು.

ಸಮಾರಂಭದಲ್ಲಿ ಐಪಿಎಸ್ ಅಧಿಕಾರಿ, ಜಿನೇಂದ್ರ ಖನಗಾಂವಿ ಅವರು ಮಾತನಾಡಿ ಜೈನ ಸಾಹಿತ್ಯವನ್ನು ಓದಿದವರಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸುಲಭವಾಗಿ ಎದುರಿಸಬಲ್ಲರು. ಇಂದಿನ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಜೈನ ಸಾಹಿತ್ಯಕ್ಕೆ ಸಂಬಂಧಿಸಿದ ಅನೇಕ ವಿಷಯಗಳಿವೆ. ಹಾಗಾಗಿ ಎಲ್ಲರೂ ಜೈನ ಸಾಹಿತ್ಯದ ಕಡೆಗೆ ಹೆಚ್ಚಿನ ಒಲವು ಕೊಡಬೇಕೆಂದು ಅವರು ತಿಳಿಸಿದರು.

ಸಮಾರಂಭದ ವೇದಿಕೆ ಮೇಲೆ ಭರತೇಶ ಶಿಕ್ಷಣ ಸಂಸ್ಥೆಯು ಅಧ್ಯಕ್ಷ ಡಾ. ಜಿನದತ್ತ ದೇಸಾಯಿ, ಆಡಳಿತ ಮಂಡಳಿಯ ಸದಸ್ಯ ಅಶೋಕ ದಾನವಡೆ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಸಾಹಿತಿಗಳಾದ ಡಿ.ಎನ್.ಅಕ್ಕಿ, ಡಾ. ಅಜೀತಪ್ರಸಾದ, ಶಾಂತಿನಾಥ ಹೊತಪೇಟೆ, ಪೂರ್ಣಿಮಾ ಗುಡಿಬಂಡೆ, ಮಹಾವೀರ ಸಗರೆ, ಡಾ. ಅಜೀತ ಮುರುಗುಂಡೆ ಅಪ್ಪಾಸಾಹೇಬ ಮುತ್ತಿನ, ಜಿನೇಂದ್ರ ಖನಗಾಂವಿ, ವಿನೋದ ದೊಡ್ಡಣ್ಣವರ, ದ.ರಾ.ಬೇಂದ್ರೆ ಪ್ರಶಸ್ತಿ ವಿಜೇತ ಡಾ. ಜಿನದತ್ತ ದೇಸಾಯಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಸಮರ್ಪಿತ 2023 ಕಾರ್ಯಕ್ರಮ ಉದ್ಘಾಟನೆ




ಬಳ್ಳಾರಿ: ಬಳ್ಳಾರಿ ನಗರದ ವಿದ್ಯಾನಗರದಲ್ಲಿ ಇರುವ ಪ್ರತಿಷ್ಠಿತ ಶ್ರೀ ನಂದಾ ವಸತಿ ಶಾಲೆಯಲ್ಲಿ 28/01/23 ರಂದು ಸಮರ್ಪಿತ 2023 ಕಾರ್ಯಕ್ರಮ ಆಯೋಜಿಸಲಾಗಿತ್ತು. ಪೋಷಕರಿಗೆ ತಮ್ಮ ಮಕ್ಕಳಿಂದ ಪಾದ ಪೂಜಾ ಕಾರ್ಯಕ್ರಮ ಮತ್ತು ಗೋಪೂಜ ಕಾರ್ಯಕ್ರಮ ಕೈಗೊಳ್ಳುವ ಮೂಲಕ ಭಾರತೀಯ ಸಂಸ್ಕೃತಿಯ ಆಚರಣೆ ಮತ್ತು ಅದರ ಆಧ್ಯಾತ್ಮಿಕ ಸತ್ಯ ಪೋಷಕರ ಮನ ಮಂದಿರಗಳಲ್ಲಿ ಅರಿವು ಮೂಡಿಸಲಾಯಿತು.

ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸಿದ ಬಳ್ಳಾ–ರಿಯ ಮಹಾಪೌರರಾದ ಶ್ರೀಮತಿ ರಾಜೇಶ್ವರಿ ಅವರಿಂದ ಕಾರ್ಯಕ್ರಮ ಉದ್ಘಾಟನೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಶಾಲೆಯ ಅಧ್ಯಕ್ಷರಾದ ವಿ.ಗಾಂಧಿಯವರು ಮಾತನಾಡುತ್ತಾ ಮಕ್ಕಳಲ್ಲಿ ಒಳ್ಳೆಯ ನಡತೆ ಹಾಗೂ ಶಿಸ್ತು ಬದ್ಧ ಜೀವನವನ್ನು ರೂಪಿಸಲು ಶಿಕ್ಷಕರ ಜೊತೆ ಪೋಷಕರ ಸಹಕಾರವೂ ತುಂಬಾ ಮುಖ್ಯವಾದುದು ಎಂದು ಕಿವಿ ಮಾತು ಹೇಳಿದರು.

ಕಾರ್ಯಕ್ರಮದ ಕೊನೆಯಲ್ಲಿ ಮಕ್ಕಳು ಕಿರು ನಾಟಕ ಹಾಗೂ ಸಾಂಪ್ರದಾಯಿಕ ನೃತ್ಯ ಪ್ರದರ್ಶಿಸುವ ಮೂಲಕ ಎಲ್ಲರ ಗಮನ ಸೆಳೆದರು. ಈ ಸಂಧರ್ಬದಲ್ಲಿ ಡಾ.ಡಿ.ಎಲ್.ರಮೇಶ್ ಗೋಪಾಲ್,ಶ್ರೀನಿವಾಸ್, ಶಾಲೆಯ ಸಿಬ್ಬಂದಿ ಮತ್ತಿತರರು ಉಪಸ್ಥಿತರಿದ್ದರು.

# ಜಿಲ್ಲಾ ಮಟ್ಟದ ಶರಣ ಸಾಹಿತ್ಯ ಸಮ್ಮೇಳನ



ಮುಗಳಖೋಡ: ಸಮೀಪದ ಹಂದಿಗುಂದ ಗ್ರಾಮದಲ್ಲಿ ಸೋಮವಾರದಂದು ಜಿಲ್ಲಾ ಮಟ್ಟದ ಶರಣ ಸಾಹಿತ್ಯ ಸಮ್ಮೇಳನವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಡೊಳ್ಳು ಬಾರಿಸುವ ಮೂಲಕ ಉದ್ಘಾಟಿಸಿ, ಹಂಪಿ ಕನ್ನಡ ವಿಶ್ವವಿದ್ಯಾಲಯದಿಂದ ಡಾಕ್ಟರೇಟ ಪಡೆದ ಡಾ. ಮಧುಸೂದನ ಬೀಳಗಿ ಇವರಿಂದ ರಚಿತವಾದ,"ರಾಯಬಾಗ ಪರಿಸರದ ಹಾಲುಮತ ಪರಂಪರೆ" ಎಂಬ ಕೃತಿಯನ್ನು ಪೂಜ್ಯರ ಸಮ್ಮುಖದಲ್ಲಿ ಲೋಕಾರ್ಪಣೆ ಮಾಡಲಾಯಿತು.

ಖ್ಯಾತ ಸಾಹಿತಿಗಳಾದ ಡಾ. ವಿ.ಎಸ್. ಮಾಳಿಯವರು ಕೃತಿ ಪರಿಚಯ ಮಾಡುತ್ತ, ಬಾಗೆನಾಡಿನ ಹಾಲುಮತದ ಪ್ರಮುಖ ಐದು ದೈವಗಳಾದ ಆಲಕನೂರಿನ ಶ್ರೀ ಕರೇಸಿದ್ದೇಶ್ವರ, ಯಲ್ಪಾರಟ್ಟಿಯ ಶ್ರೀ ಅರಣ್ಯಸಿದ್ಧೇಶ್ವರ, ಕಂಕಣವಾಡಿಯ ಶ್ರೀ ಹಾಲಸಿದ್ಧೇಶ್ವರ, ಚಿಂಚಲಿಯ ಶಕ್ತಿಮಾತೆ ಶ್ರೀ ಮಾಯವ್ವಾ ಮತ್ತು ಬೆಕ್ಕೇರಿಯ ಶ್ರೀ ಲಕ್ಕವ್ವ ದೇವತೆಯನ್ನು ಪರಿಚಯಿಸುವ ಈ ಮಹಾಪ್ರಬಂಧವು ಕುರುಬ ಜನಾಂಗದ ಸಾಂಸ್ಕೃತಿಕ ಇತಿಹಾಸದ ಮೇಲೆ ಬೆಳಕು ಚೆಲ್ಲುವುದರ ಜೊತೆಗೆ ಹಾಲುಮತದ ಆರಾಧನಾ ಕಲೆಗಳು, ಸಾಮಾಜಿಕ ಮತ್ತು ಧಾರ್ಮಿಕ ಆಚರಣೆ, ನಂಬಿಕೆ, ಸಂಪ್ರದಾಯ, ಸಂಸ್ಕೃತಿಯನ್ನು ಬಿಂಬಿಸಿ ಜನಪದ ಸಂಸ್ಕೃತಿಯನ್ನು ಪ್ರತಿಬಿಂಬಿಸುತ್ತದೆ ಎಂದರು.

# ಎಸ್.ಎಸ್.ಎಲ್.ಸಿ. ಫಲಿತಾಂಶ ಸುಧಾರಣೆ ಕಾರ್ಯಾಗಾರ

ಬೆಳಗಾವಿ: ನಗರದ ಸುರೇಶಅಂಗಡಿ ಶಿಕ್ಷಣ ಸಂಸ್ಥೆಯಅಂಗಡಿ ವಾಣಿಜ್ಯ ಮತ್ತು ವಿಜ್ಞಾನ ಮಹಾವಿದ್ಯಾಲಯ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಬೆಳಗಾವಿ ಇವರ ಸಂಯುಕ್ತಆಶ್ರಯದಲ್ಲಿ ಎಸ್. ಎಸ್.ಎಲ್.ಸಿ. ಫಲಿತಾಂಶ ಸುಧಾರಣೆ ಕಾರ್ಯಾಗಾರವು ದಿ. 24ನೇ ಜನವರಿ 2023ರಂದು ಅಂಗಡಿ ಆಡಿಟೋರಿಯಂನಲ್ಲಿ ಯಶಸ್ವಿಯಾಗಿ ನಡೆಸಲಾಯಿತು.

ಕಾರ್ಯಗಾರದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆಯನ್ನು ಮಂಗಲ ಎಸ್. ಅಂಗಡಿ, ಸಂಸದರು, ಬೆಳಗಾವಿ ಹಾಗೂ ಅಧ್ಯಕ್ಷರು, ಸುರೇಶಅಂಗಡಿ ಶಿಕ್ಷಣ ಸಂಸ್ಥೆ, ಬೆಳಗಾವಿ, ತಮ್ಮ ಅಧ್ಯಕ್ಷಿಯ ಭಾಷಣದಲ್ಲಿ ಕಾರ್ಯಾಗಾರವನ್ನು ಉತ್ತಮವಾಗಿ ಬಳಸಿಕೊಳ್ಳಲು ಮತ್ತು ಹೆಚ್ಚು ಅಂಕಗಳನ್ನು ಗಳಿಸಲು ವಿದ್ಯಾರ್ಥಿಗಳಿಗೆ



ಸಲಹೆ ನೀಡಿದರು.

ಸಮಾರಂಭದ ಮುಖ್ಯ ಅತಿಥಿಗಳಾದ ಶ್ರೀ ರಾಮುಗುಗವಾಡ, ಕೆ.ಎಸ್.ಎಚ್.ಎಸ್. ಸಹಾಯಕ ಶಿಕ್ಷಕರ ಸಂಘದ ಕಾರ್ಯದರ್ಶಿ, ಬೆಂಗಳೂರು, ಅವರು ಮಾತನಾಡಿ ವಿದ್ಯಾರ್ಥಿಗಳು ತಮ್ಮ ವೃತ್ತಿಜೀವನದಲ್ಲಿ ಉತ್ತಮ ಸಾಧನೆ ಮಾಡಲು ಶ್ರಮಿಸಬೇಕು ಎಂದು ಕರೆ ನೀಡಿದರು.

ಗೌರವ ಅತಿಥಿಗಳಾಗಿ ಆಗಮಿಸಿದ ಸುರೇಶಅಂಗಡಿ ಶಿಕ್ಷಣ ಸಂಸ್ಥೆಯ ನಿರ್ದೇಶಕಿಡಾ. ಸ್ಫೂರ್ತಿಆರ್. ಪಾಟೀಲ ಮತ್ತು ಬೆಳಗಾವಿ ಜಿಲ್ಲಾ ಮುಖ್ಯೋಪಾಧ್ಯಾಯರ ಸಂಘದ ಅಧ್ಯಕ್ಷರಾದ ಶ್ರೀ ಎಸ್.ಎಸ್. ಮಠದ ಮಾತನಾಡಿ ವಿದ್ಯಾರ್ಥಿಗಳು ಮುಂಬರವ ಎಸ್.ಎಸ್. ಎಲ್.ಸಿ. ಪರೀಕ್ಷೆಯಲ್ಲಿ ಯಶಸ್ವಿಯಾಗಲು ಸರಿಯಾದ ವೇಳಾ ಪಟ್ಟಿಯನ್ನು ಹೊಂದಿ ಅದನ್ನು ಕ್ರಮ ಬದ್ಧವಾಗಿ ಪಾಲಿಸುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ 13 ಪ್ರೌಢಶಾಲೆಗಳ 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಕಾರ್ಯಾಗಾರದ ಫಲಾನುಭವಿಗಳಾಗಿದ್ದರು.

ಸಂಪನ್ಮೂಲ ವ್ಯಕ್ತಿಗಳಾಗಿ ಕಾರ್ಲೆ ಪ್ರೌಢಶಾಲೆಯ ವಿಜ್ಞಾನ ವಿಷಯಕ್ಕೆ ಶ್ರೀ ಎಂ.ಡಿ. ದೇಸಾಯಿ ಮತ್ತು ತಂಗಣಕರ್, ಅಶ್ವಿನಿ ಕಲಕಂಬಕರ, ಸರ್ಕಾರಿ ಪ್ರೌಢಶಾಲೆ, ಕಲ್ಲೇಹೋಳ, ಶ್ರೀ ಜೈನಾಪುರೆ, ಕೆ.ಎಸ್. ಆರ್.ಪಿ ಪ್ರೌಢಶಾಲೆ, ಮಚ್ಚೆ, ಇಂಗ್ಲೀಷ್ ವಿಷಯ, ಡಾ. ಷಣ್ಮುಖ ಕುಚಬಾಳ, ಅಂಗಡಿ ವಾಣಿಜ್ಯ ಮತ್ತು ವಿಜ್ಞಾನ ಮಹಾವಿದ್ಯಾಲಯ, ಗಣಿತ ವಿಷಯದ ಕುರಿತು ಉಪನ್ಯಾಸ ನೀಡಿದರು.

ಪ್ರೊ. ಸಂಗೀತಾದೇಸಾಯಿ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಕುರಿತು ಉಪನ್ಯಾಸ ನೀಡಿದರು.

ವೇದಿಕೆಯಲ್ಲಿ ಡಾ. ಎಂ.ಎಸ್. ಮೇದಾರ, ಬಿ.ಆರ್.ಸಿ., ಬೆಳಗಾವಿ, ಗ್ರಾಮೀಣ, ಕೆ.ಎಸ್. ಎಚ್.ಎಸ್. ಸಹಾಯಕ ಶಿಕ್ಷಕರ ಸಂಘದ ಅಧ್ಯಕ್ಷ ಶ್ರೀ ಎಂ.ಬಿ. ಹುಲಿಮನಿ, ಎಸ್.ಎಸ್.ಎಲ್.ಸಿ. ನೋಡಲ್ ಅಧಿಕಾರಿ ಶ್ರೀ ಸುನೀಲ ಕುಟ್ರೆ, ಬಿ.ಇ.ಓ. ಕಚೇರಿ, ಬೆಳಗಾವಿ ಗ್ರಾಮಾಂತರ ಉಪಸ್ಥಿತರಿದ್ದರು. ಕಾರ್ಯಾಗಾರದಲ್ಲಿ ಸುರೇಶ ಅಂಗಡಿ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಶ್ರೀ ರಾಜು ಜೋಶಿ, ವಿವಿಧ ಪ್ರೌಢಶಾಲಾ ಶಿಕ್ಷಕರು, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕ್ರಾರ್ಯಾಗಾರವು ಬಿ.ಕಾಂ. ವಿದ್ಯಾರ್ಥಿನಿಗಳಾದ ಕು. ನಿಕಿತಾ ಹಾಗೂ ತಂಡದವರ ಪ್ರಾರ್ಥನಾ ಗೀತೆಯೊಂದಿಗೆ ಪ್ರಾರಂಭವಾಯಿತು.

ಪ್ರೊ. ನಾಗೇಶ್ವರಡೆಮಿನಕೊಪ್ಪ ಸ್ವಾಗತಿಸಿದರು, ಪ್ರೊ. ಸ್ಮೀತಾ ಬಿ.ಕೆ.ನಿರೂಪಿಸಿದರು. ಡಾ. ಉಮೇಶ ಕಾಳೆ ವಂದಿಸಿದರು.

# ಕಲಿಕಾ ಹಬ್ಬ ಯಶಸ್ವಿ



ಹುಳಿಯಾರು: ಹುಳಿಯಾರು ಹೋಬಳಿಯ ದಸೂಡಿ ಸರ್ಕಾರಿ ಪೌಡಶಾಲಾ ಆವರಣದಲ್ಲಿ ಸೋಮವಾರ ಕಲಿಕಾಹಬ್ಬ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ನೋಡಲ್ ಅಧಿಕಾರಿ ಹಾಗೂ ದಸೂಡಿ ಪ್ರೌಢಶಾಲೆಯ ಮುಖ್ಯಶಿಕ್ಷಕ ರುದ್ರೇಶ್ ಕಾರ್ಯಕ್ರಮದ ಅದ್ಯಕ್ಷತೆವಹಿಸಿ ಮಾತನಾಡಿ ವಿವಿದ ಚಟವಟಿಕೆ ಆದಾರಿತ ಕಲಿಕೆ ಬಗ್ಗೆ ಪಾಲಕರು ಮತ್ತು ಸಮುದಾಯಕ್ಕೆ ಅರಿವನ್ನು ಉಂಟು ಮಾಡಿಸಿ ವೈಜ್ಞಾನಿಕ ರೀತಿಯಲ್ಲಿ ಕಲಿಯುವ ಪ್ರಕ್ರಿಯೆಯನ್ನು ಸಂತೋಷದಿಂದ ಕಲಿಯುವಂತೆ ಪ್ರೋತ್ಸಾಹಿಸಲು ನಾಲ್ಕು ವಿವಿದ ರೀತಿಯ ಚಟುವಟಿಕೆಗಳನ್ನು ಆಯೋಜಿಸಿ ಮಕ್ಕಳು ಕಲಿಕೆಯಲ್ಲಿ ತೊಡಗಿಸಿಕೊಳ್ಳುವಂತೆ ಆಯೋಜಿಸುವುದು ಕಲಿಕಾಹಬ್ಬದ ಉದ್ದೇಶ ಎಂದು ತಿಳಿಸಿದರು.

ಕ್ಲಸ್ಟರ್ ಅಧಿಕಾರಿ ಲೋಕೇಶ್ ಮಾತನಾಡಿ ಹಾಡುಆಡು, ಮಾಡುಆಡು ಬಣ್ಣಕಾಗದಕತ್ತರಿ, ಊರುಸುತ್ತೋಣ ಎಂಬ ನಾಲ್ಕು ವಿಷಯಗಳ ಬಗ್ಗೆ ಸವಿವರವಾಗಿ ಕಾರ್ಯಕ್ರಮದಲ್ಲಿ ವಿವರಿಸಿದರು.

ಗ್ರಾಮ ಪಂಚಾಯಿತಿ ಸದಸ್ಯ ಕೆ.ಮರಿಯಪ್ಪ ಮತನಾಡಿ ಈ ರೀತಿಯ ಕಾರ್ಯಕ್ರಮಗಳು ಮಕ್ಕಳಲ್ಲಿ ಹುರುಪು ಮತ್ತು ಚೈತನ್ಯ ತುಂಬುತ್ತದೆ. ಮಕ್ಕಳಲ್ಲಿನ ಆಲೋಚನೆ, ಚಿಂತನೆ ಹೊರತರಲು ಅತ್ಯವಶ್ಯಕ ಎಂದರು.

ಕಾರ್ಯಕ್ರಮವು ಪೂರ್ಣ ಕುಂಭ ಮೆರವಣಿಗೆ ಮೂಲಕ ಪ್ರಾರಂಭವಾಗಿ ವಿವಿದ ನೃತ್ಯರೂಪಕಗಳು, ಜಾನಪದ ಗೀತೆ, ಚಿತ್ರ ಬಿಡುಸುವುದು, ಚಿತ್ರಕಲಾರೂಪಕ, ಗಣ್ಯರ ಸಂದರ್ಶನ ಸೇರಿದಂತೆ ಮಕ್ಕಳಲ್ಲಿ ಮನೋಚೈತನ್ಯ ರೂಪಿಸುವ ನವಕಾರ್ಯಕ್ರಮ ಇದಾಗಿತ್ತು. ಈ ಕಾರ್ಯಕ್ರಮಕ್ಕೆ ಕ್ಲಸ್ಟರ್ ಹಂತದ ಎಲ್ಲಾ ಕಿರಿಯ ಹಾಗೂ ಹಿರಿಯ ಪ್ರಾಥಮಿಕ ಮತ್ತು ಪೌಡಶಾಲಾ 120 ಮಕ್ಕಳು ಭಾಗವಹಿಸಿದ್ದರು.

# ಸ್ಯಾಮ್ಸಂಗ್ ಒಪೆರಾ ಹೌಸ್‌ನಲ್ಲಿ ಸ್ಟಾರ್ ಬಕ್ಸ್

ಹುಬ್ಬಳ್ಳಿ: ಬೆಂಗಳೂರಿನ ಹೃದಯ ಭಾಗದಲ್ಲಿರುವ ಐತಿಹಾಸಿಕ ಸ್ಯಾಮ್ಸಂಗ್ ಒಪೆರಾಹೌಸ್‌ಅನ್ನು ಸ್ಯಾಮ್ಸಂಗ್ ನವೀಕರಿಸಿದ್ದು, ಹೊಸ ತಂತ್ರಜ್ಞಾನ ಅನುಭವಗಳನ್ನು ಅನಾವರಣಗೊಳಿಸಲಾಗಿದೆ ಮತ್ತು ಸ್ಟಾರ್ಬಕ್ಸ್ ಸ್ಟೋರ್ ಅನ್ನೂ ತೆರೆಯಲಾಗಿದೆ. ಸ್ಯಾಮ್ಸಂಗ್ ಒಪೆರಾ ಹೌಸ್ಗೆ ಭೇಟಿ ನೀಡುವ ಗ್ರಾಹಕರು ಇನ್ನು ಸ್ಯಾಮ್ಸಂಗ್ ಎಲ್ಲ ಉತ್ಪನ್ನಗಳನ್ನೂ ನೋಡಬಹುದು. ಅಲ್ಲದೆ, ಕನೆಕ್ಟೆಡ್ ಲಿವಿಂಗ್, ಗೇಮಿಂಗ ಅರೆನಾ, ಆಡಿಯೋ, ಹೋಮ್ಥಿಯೇಟರ್ ಮತ್ತು ಲೈಫ್ಸ್ಟೈಲ್ಟಿವಿಗಳನ್ನೂ ವೀಕ್ಷಿಸಬಹುದು. ಸ್ಮಾರ್ಟ್ಥಿಂಗ್ಸ್ ಜೊತೆಗೆ ಹಲವು ಸಾಧನಗಳು ಹೇಗೆ ಸಂಪರ್ಕಸಾಧಿಸುತ್ತವೆ ಎಂಬುದನ್ನು ನೋಡುವುದರ ಜೊತೆಗೆ ಒಂದು ಕಪ್ ಕಾಫಿಯನ್ನೂ ಸವಿಯಬಹುದು.

ಹೊಸ 70 ಸೀಟಸ್ಟಾರ್ ಬಕ್ಸ್ ಔಟ್ಲೆಟ್ ಅನ್ನು ಸ್ಯಾಮ್ಸಂಗ್ ಸೌತ್ವೆಸ್ಟ್ ಏಷ್ಯಾ ವಿಭಾಗದ ಅಧ್ಯಕ್ಷ ಮತ್ತು ಸಿಇಒ ಜೊಂಗ್ ಬಮ್ ಪಾರ್ಕ್ ಹಾಗೂ ಟಾಟಾ ಸ್ಟಾರ್ಬಕ್ಸ್ ಸಿಇಒ ಸುಶಾಂತ್ ದಾಶ್ ಸ್ಯಾಮ್ಸಂಗ್ ಒಪೆರಾಹೌಸ್ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಉದ್ಘಾಟಿಸಿದ್ದಾರೆ. ಕಾರ್ಯಕ್ರಮದಲ್ಲಿ ಕಾಫಿ ರುಚಿನೋಡುವ ಸೆಷನ್, ಸ್ನೇಹಿತರು ಮತ್ತು ಕೌಟುಂಬಿಕ ಕಾರ್ಯಕ್ರಮ ಮತ್ತು ಸಂಗೀತ ಕಾರ್ಯಕ್ರಮವೂ ಇತ್ತು. ಇದು ಸೇರಿದ್ದ ಪ್ರೇಕ್ಷಕರನ್ನು ಮನಸೂರೆಗೊಂಡಿತು.

"ಹೊಸ ತಲೆಮಾರಿನ ಗ್ರಾಹಕರು ಕಳೆದ ನಾಲ್ಕುವರ್ಷಗಳಿಂದಲೂ ಸ್ಯಾಮ್ಸಂಗ್ ಒಪೆರಾಹೌಸ್ಗೆ ಪ್ರೀತಿಯಿಂದ ಆಗಮಿಸಿದ್ದಾರೆ. ಈಗ, ಈ ಅನುಭವವನ್ನು ಇನ್ನೂ ಎತ್ತರ–ಕ್ಕೆ ಕೊಂಡೊಯ್ಯಲಿದ್ದೇವೆ. ಇದರಲ್ಲಿ ಕನೆಕ್ಟೆಡ್ ಲಿವಿಂಗ್ಝೋನ್, ಗೇಮಿಂಗ್ಅರೆನಾ, ಹೋಮ್ಥಿಯೇಟರ್ ಝೋನ್ ಹಾಗೂ ಇತರೆ ಸೌಲಭ್ಯಗಳನ್ನೂ ಕಲ್ಪಿಸಿದ್ದೇವೆ. ಈ ಅನುಭವಕ್ಕೆ ಸ್ಟಾರ್ಬಕ್ಸ್ ಸ್ಟೋರ್ ಅನ್ನೂಸೇರಿಸಲು ನಮಗೆ ಖುಷಿಯಾಗುತ್ತಿದೆ. ಈ ಕಾಲದ ಯುವಕರಿಗೆ ಇರುವ ಉತ್ಸಾಹಕರ ಸಂಗತಿಗಳಾದ ತಂತ್ರಜ್ಞಾನ ಮತ್ತು ಕಾಫಿಯನ್ನು ನಾವು ಈ ಮೂಲಕ ಒಟ್ಟಿಗೆ ತರುತ್ತಿದ್ದೇವೆ" ಎಂದು ಸ್ಯಾಮ್ಸಂಗ್ ಸೌತ್ವೆಸ್ಟ್ ಏಷ್ಯಾದ ಅಧ್ಯಕ್ಷ ಮತ್ತು ಸಿಇಒ ಜಾಂಗ್ ಬಮ್ಪಾರ್ಕ್ ಹೇಳಿದ್ದಾರೆ."

ಕಳೆದ ವರ್ಷ ಟಾಟಾಸ್ಟಾರ್ ಬಕ್ಸ್‌ಗೆ ವಿಸ್ತರಣೆ ಯೋಜನೆಗಳ ದೃಷ್ಟಿಯಲ್ಲಿ ಅತ್ಯಂತ ಕಾರ್ಯಬಾಹುಳ್ಯದ ವರ್ಷವಾಗಿತ್ತು ಮತ್ತು ಹೊಸ ನಗರಗಳು ಮತ್ತು ಸ್ಥಳಗಳಲ್ಲಿ ನಮ್ಮ ಗ್ರಾಹಕರಿಗೆ ಅರ್ಥವತ್ತಾದ ಅನುಭವವನ್ನು ನಾವು ಈ ಅವಧಿಯಲ್ಲಿ ಒದಗಿಸಿದ್ದೇವೆ. ಪ್ರತಿಗ್ರಾಹಕರಿಗೂ ವಿಶಿಷ್ಟವಾದ ಸ್ಟಾರ್ಬಕ್ಸ್ ಅನುಭವ ದೊರಕಬೇಕು ಎಂದು ವಿಸ್ತರಣೆ ಮಾಡುವಾಗ ನಾವು ಗುರಿಹೊಂದಿರುತ್ತೇವೆ. ಸ್ಯಾಮ್ಸಂಗ್ ಒಪೆರಾ ಹೌಸ್ಗೆ ನಮ್ಮ ವಿಶಿಷ್ಟಸ್ಟಾರ್ಬಕ್ಸ್ ಅನುಭವವನ್ನು ಒದಗಿಸುವುದಕ್ಕೆ ನಮಗೆ ಸಂತೋಷವಾಗುತ್ತಿದೆ. ಇದರಲ್ಲಿ ಪ್ರೀಮಿಯಂ ಗುಣಮಟ್ಟದ ಕಾಫಿ, ಕೈಯಿಂದ ತಯಾರಿಸಿದ ಪಾನೀಯಗಳು, ವಿಶಿಷ್ಟ ತಿನಿಸುಗಳು ಮತ್ತು ನಮ್ಮ ಬರಿಸ್ಟಾರವರಿಂದ ಆತ್ಮೀಯ ಸ್ವಾಗತ ಲಭ್ಯವಿದೆ" ಎಂದು ಟಾಟಾಸ್ಟಾರ್ ಬಕ್ಸ್ ಪ್ರೈ. ಲಿ. ಸಿಇಒ ಸುಶಾಂತ್ ದಾಶ್ ಹೇಳಿದ್ದಾರೆ.

ಇದು ಆರಂಭವಾದಾಗಿನಿಂದ 1,000 ಕ್ಕೂ ಹೆಚ್ಚು ಕಾರ್ಯ ಕ್ರಮಗಳನ್ನು ವಿವಿಧ ವಿಭಾಗಗಳಲ್ಲಿ ಆಯೋಜಿಸಲಾಗಿದೆ. ಉತ್ಪನ್ನ ಅನುಭವ, ಗ್ರಾಹಕರ ತೊಡಗಿಸಿ ಕೊಳ್ಳುವಿಕೆ ಮತ್ತು ಮನರಂಜನೆ, ಫೋಟೋಗ್ರಫಿ, ಡೂಡ್ಲಿಂಗ್, ವೀಡಿಯೋ ಎಡಿಟಿಂಗ್ಗೆ ಗ್ಯಾಲಾಕ್ಸಿ ವರ್ಕ್ ಶಾಪ್ಗಳು, ಟೆಡ್ ಟಾಕ್ಗಳು, ಫ್ಯಾಷನ್ ಶೋಗಳು, ಬೇಕಿಂಗ್ ವರ್ಕ್ಶಾಪ್ಗಳು, ಸಿನಿಮಾ ಪ್ರದರ್ಶನ ಹಾಗೂ ಇನ್ನೂಹಲವು ಕಾರ್ಯ ಕ್ರಮಗಳನ್ನು ಆಯೋಜಿಸಲಾಗಿದೆ.

ಒಪೆರಾಹೌಸ್ ಇತ್ತೀಚೆಗೆ ಕೊರಿಯನ್ ಕೆ–ಫಿಯೆಸ್ಟಾ ಜೊತೆಗೆ ನಾಲ್ಕನೇ ವಾರ್ಷಿಕೋತ್ಸವವನ್ನೂ ಆಚರಿಸಿದೆ.

2023 ರಲ್ಲಿ ಎಕ್ಸ್ಪೀರಿಯನ್ಸ್ ಸೆಂಟರ್ನ ಹೊಸದಾಗಿ ನವೀಕರಿಸಿದ ಹೊರಾಂಗಣ ಸ್ಥಳದಲ್ಲಿ ಡಿಜಿಟಲ್ ಆರ್ಟ, ಸಂಸ್ಕೃತಿ, ಸಂಗೀತ ಮತ್ತು ತಂತ್ರಜ್ಞಾನದ ವಿಷಯಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಿದೆ.

# ಪದವಿ ವಿದ್ಯಾರ್ಥಿಗಳಿಗೆ ಆರ್ಥಿಕ ಅಭಿವೃದ್ಧಿಯ ಮಾರ್ಗಸೂಚಿ

ಹುಳಿಯಾರು: ಸೈಂಟ್ ಕ್ಲಾರೆಟ್ ಕಾಲೇಜು ಬೆಂಗಳೂರು ಹಾಗೂ ಹುಳಿಯಾರು–ಕೆಂಕೆರೆ ಬಿ.ಎಂ.ಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಒಡಂಬಡಿಕೆ (ಎಂಓಯು) ಅಡಿಯಲ್ಲಿ ಬಿ.ಎಂ.ಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯ ವಿಭಾಗ ಮತ್ತು ಐಕ್ಯೂಎಸಿ ಸಹಯೋಗದೊಂದಿಗೆ "ನಾವಿನ್ಯತೆ ಮತ್ತು ಬೌದ್ಧಿಕ ಆಸ್ತಿ– ಆರ್ಥಿಕ ಅಭಿವೃದ್ಧಿಯ ಮಾರ್ಗಸೂಚಿ" (Innovation and Intellectual Property- A Road Map towards Economic Development)" ಎಂಬ ವಿಷಯದ ಕುರಿತು ಸೋಮವಾರ ವಿಶೇಷ ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಸೈಂಟ್ ಕ್ಲಾರೆಟ್ಕಾಲೇಜಿನ ವಾಣಿಜ್ಯಶಾಸ್ತ್ರ




ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಸಫೀರ್ ಪಾಷಾ ಎಂ. ಹಾಗೂ ಸೈಂಟ್ ಕ್ಲಾರೆಟ್ ಇನ್ಸಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್‌ನ ನಿರ್ವಹಣೆ ಮತ್ತು ವ್ಯವಹಾರ ಆಡಳಿತ ವಿಭಾಗದ ಮುಖ್ಯಸ್ಥರಾದ ಡಾ.ಅರಿಜಿತ್ ರಾಯ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು.

ಡಾ. ಸಫೀರ್ ಪಾಷಾ ಎಂ. ಅವರು ಕಾಪಿ ರೈಟ್ಸ್ (ಕೃತಿ ಸ್ವಾಮ್ಯ), ಜಿಯೋಗ್ರಾಫಿಕಲ್ ಇಂಡಿಕೇಟರ್ಸ್ (ಭೌಗೋಳಿಕ ಸೂಚಕಗಳು), ಟ್ರೇಡ್ ಸೀಕ್ರೆಟ್ಸ್ (ವ್ಯಾಪಾರ ರಹಸ್ಯ), ಪೇಟೆಂಟ್ ಹಾಗೂ ಅವುಗಳ ವಿಧಗಳ ಕುರಿತು ಬಹಳ ಆಸಕ್ತಿದಾಯಕವಾಗಿ ದೃಶ್ಯಗಳ ಮೂಲಕ ನಿದರ್ಶನ ಸಹಿತ ವಿವರಿಸಿದರು.

ಡಾ. ಅರಿಜಿತ್ ರಾಯ್ ಅವರು ಸಾಫ್ಟ್ ಸ್ಕಿಲ್ಸ್ (ಮೃದು ಕೌಶಲ್ಯ) ಬಗ್ಗೆ ವಿವರಿಸುತ್ತಾ ತಮ್ಮ ಹಾವ–ಭಾವಗಳು ಹಾಗೂ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳಲ್ಲಿ ಉತ್ಸಾಹ ತುಂಬಿದರು."ಒಬ್ಬ ವ್ಯಕ್ತಿಗೆ ಮಾನವ ಸಂಬಂಧಗಳು, ಮೌಲ್ಯಗಳ ಮಹತ್ವ, ಜವಾಬ್ದಾರಿಗಳು, ಆತ್ಮವಿಶ್ವಾಸ, ಸಂವಹನ, ನಿರ್ಧಾರ ತೆಗೆದುಕೊಳ್ಳುವುದು ಇತ್ಯಾದಿಗಳು ಬಹಳ ಮುಖ್ಯ ಎಂದರು.

ಭಾಷೆಯೇ ಬೇರೆ, ಸಂವಹನವೇ ಬೇರೆ. ಕೇವಲ ಭಾಷೆ ಎಂದರೆ ಸಂವಹನವಲ್ಲ. ಆಂಗ್ಲ ಭಾಷೆಯ ಜ್ಞಾನದ ಕೊರತೆ ಇದೆ ಎಂದ ಮಾತ್ರಕ್ಕೆ ಯಾರೂ ಕೂಡ ತಮ್ಮನ್ನು ತಾವು ಕಡಿಮೆ ಎಂದು ಅಂದಾಜಿಸಬೇಕಿಲ್ಲ"ಎಂದರು.

ನಂತರ ವಿದ್ಯಾರ್ಥಿಗಳ ಪರವಾಗಿ ಪುಷ್ಪ ಕೆ.ಯು. ಅವರು ತಮ್ಮ ಅನಿಸಿಕೆ ಹಂಚಿಕೊಂಡರು.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ವೀರಣ್ಣ ಎಸ್.ಸಿ. ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ,"ಯಾವುದೇ ಒಂದು ವಿಚಾರ ಅಥವಾ ವಸ್ತು ನಮ್ಮ ದೈನಂದಿನ ಜೀವನದಲ್ಲಿ ನಾವಿನ್ಯತೆ ಮತ್ತು ಸಂಶೋಧನೆ ಹೊರತಾಗಿಲ್ಲ. ನಾವೆಲ್ಲರೂ ಇದರ ಫಲಾನುಭವಿಗಳು"ಎಂದರು.

## ಸಹಕಾರ ಸಂಘಗಳು/ಸೌಹಾರ್ದ ಸಹಕಾರಿಗಳಿಗೆ ಲೆಕ್ಕಪರಿಶೋಧನೆ ಪೂರೈಸಲು ಆದೇಶ

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಕಾರ ಸಂಘಗಳು/ಸೌಹಾರ್ದ ಸಹಕಾರಿಗಳು ಕಡ್ಡಾಯವಾಗಿ ಲೆಕ್ಕಪರಿಶೋಧನೆಯನ್ನು ನಿಗದಿತ ಅವಧಿಯೊಳಗೆ ಪೂರೈಸಬೇಕಾಗಿರುತ್ತದೆ.

ಕೆಲವು ಸಂಘಗಳು ಲೆಕ್ಕಪರಿಶೋಧಕರನ್ನು ಆಯ್ಕೆಮಾಡಿಕೊಳ್ಳದಿರುವುದು ಕಂಡು ಬಂದಿರುತ್ತದೆ. ಈ ಪ್ರಯುಕ್ತ ನಿರ್ದೇಶಕರು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ಕರ್ನಾಟಕ ರಾಜ್ಯ, ಬೆಂಗಳೂರು ರವರು ಸಹಕಾರ ಸಂಘಗಳ ಕಾಯ್ದೆ 63(2) ರಂತೆ ಮತ್ತು ಸೌಹಾರ್ದ ಸಹಕಾರ ಸಂಘಗಳ ಕಾಯ್ದೆ 33(2) ರಂತೆ ವಂಟನೆ ಆದೇಶ ನೀಡಿರುತ್ತಾರೆ.

ಈ ಪ್ರಯುಕ್ತ ನಿಯುಕ್ತಿಗೊಂಡ ಲೆಕ್ಕಪರಿಶೋಧಕರಿಗೆ ಸಹಕಾರ ನೀಡಿ ಲೆಕ್ಕಪರಿಶೋಧನೆ ಪೂರೈಸಲು ವಿನಂತಿಸಲಾಗಿದೆ. ಲೆಕ್ಕಪರಿಶೋಧನೆ ಬಾಕಿ ಉಳಿದಲ್ಲಿ ಸಹಕಾರ ಕಾಯ್ದೆ ಅನ್ವಯ ಅಗತ್ಯ ಕ್ರಮವಿಟ್ಟು ನೊಂದಣಿ ರದ್ದತಿಗೆ ಕ್ರಮಕೈಗೊಳ್ಳಲಾಗುವುದು ಎಂದು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಮಡಿವಾಳ ಮಾಚಿದೇವ ಜಯಂತಿ ಉತ್ಸವ

ಬೆಳಗಾವಿ: ಫೆಬ್ರುವರಿ.1 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ, ಬೆಳಗಾವಿ ಇವರ ಆಶ್ರಯದಲ್ಲಿ ಶ್ರೀ ಮಡಿವಾಳ ಮಾಚಿದೇವ ಜಯಂತಿ ಉತ್ಸವ ನಡೆಯಲಿದೆ.

ಅಂದು ಬೆಳ್ಳಿಗೆ 9.30 ಕ್ಕೆ ಶ್ರೀ ಮಡಿವಾಳ ಮಾಚಿದೇವ ಭಾವ ಚಿತ್ರದ ಭವ್ಯ ಮೆರವಣಿಗೆ ಕೋಟೆ ಕೆರೆಯಿಂದ ಕುಮಾರ ಗಂಧರ್ವ ಕಲಾ ಮಂದಿರದ ವರಗೆ ನಡೆಯಲಿದ್ದು, 11 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯಲಿದೆ.

ಜಲ ಸಂಪನ್ಮೂಲ, ಭಾರಿ ಮತ್ತು ಮಧ್ಯಮ ನೀರಾವರಿ, ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಗೋವಿಂದ ಎಂ. ಕಾರಜೋಳ ಇವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಜರಾಯಿ ಹಜ್ ಹಾಗೂ ವಕ್ಫ್ ಸಚಿವರಾದ ಶಶಿಕಲಾ ಜೊಲ್ಲೆ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಹಾಗೂ ವಿಧಾನ ಸಭೆ ಶಾಸಕರಾದ ಅನಿಲ ಎಸ್. ಬೆನಕೆ ಇವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಹಾಗೂ ಮತ್ತಿತರ ಗಣ್ಯರು ಮತ್ತು ಜಿಲ್ಲೆಯ ಜನಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಇವರು ತಿಳಿಸಿದ್ದಾರೆ.

## NHM ಯೋಜನೆಯಡಿ ಗೋಡಂಬಿ ಸಂಸ್ಕರಣಾ ಘಟಕಕ್ಕೆ ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನ ಬೆಳಗಾವಿ ತಾಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ರಾಷ್ಟ್ರೀಯ ತೋಟಗಾರಿಕೆ ಮಿಷನ್(NHM) ಯೋಜನೆಯಡಿ ಪ್ರಾಥಮಿಕ ಸಂಸ್ಕರಣಾ ಘಟಕಕ್ಕೆ (ಗೋಡಂಬಿ ಸಂಸ್ಕರಣಾ ಘಟಕ) ಶೇ.40 ರಷ್ಟು ಸಹಾಯಧನ ಪಡೆಯಲು ಅವಕಾಶವಿರುತ್ತದೆ.

ಆಸಕ್ತ ರೈತ ಫಲಾನುಭವಿಯ ಹೆಸರಿನಲ್ಲಿ ನಿವೇಶನ/ ಜಮೀನು ಹೊಂದಿದ್ದು, ಸದರಿ ಕಾರ್ಯಕ್ರಮವು "Credit linked Back ended subsidy ಆಗಿರುವುದರಿಂದ ರಾಷ್ಟ್ರೀಕೃತ ಬ್ಯಾಂಕಿನಿಂದ ದಿರ್ಘಾವಧಿ ಸಾಲ ಪಡೆಯುವುದು ಕಡ್ಡಾಯವಾಗಿರುತ್ತದೆ.

ಆದ್ದರಿಂದ ಅರ್ಹ ರೈತರು ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ತಾಲೂಕೂ ತೋಟಗಾರಿಕೆ ಕಛೇರಿಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಬೆಳಗಾವಿ ಇವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ನೇಕಾರ ಸಮ್ಮಾನ ಯೋಜನೆಯಡಿ ನೇಕಾರರು ಹಾಗೂ ಕಾರ್ಮಿಕರಿಗೆ ಆರ್ಥಿಕ ನೆರವು

ಬೆಳಗಾವಿ : ವಿದ್ಯುತ್ ಮಗ್ಗ ವಿದ್ಯುತ್ ಮಗ್ಗ ಹಾಗೂ ಮಗ್ಗಪೂರ್ವ ಘಟಕಗಳ ನೇಕಾರರು ಹಾಗೂ ಕಾರ್ಮಿಕರಿಗೆ ತಲಾ ರೂ.5,000/–ಗಳ ವಾರ್ಷಿಕ ಆರ್ಥಿಕ ನೆರವು ನೀಡುವ ನೇಕಾರ ಸಮ್ಮಾನ(ವಿದ್ಯುತ್ ಮಗ್ಗ) ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ.

ಸದರಿ ಯೋಜನೆಯಡಿ ನೆರವು ಪಡೆಯಲು ನೇಕಾರರ ಘಟಕಗಳು ವಿದ್ಯುತ್ ಮಗ್ಗ ಗಣತಿಯಲ್ಲಿ ನೋಂದಾಯಿಸಿಕೊಂಡಿರಬೇಕು. ಸದರಿ ಗಣತಿಯನ್ನು ಎ.ಐ.ಎಮ್.ಎಸ್ ಸಂಸ್ಥೆಯಿಂದ ಕೈಗೊಳ್ಳಲಾಗುತ್ತಿದ್ದು, ಗಣತಿಯಲ್ಲಿ ನೋಂದಾಯಿಸಲು ಬಿಟ್ಟು ಹೋದ ಘಟಕದವರು ಯಾವುದೇ ಮದ್ಯವರ್ತಿಗಳ ಆಸೆ–ಆಮಿಷಕ್ಕೆ ಒಳಗಾಗದೇ, ನೇರವಾಗಿ ಈ ಕಛೇರಿಯನ್ನು ಸಂಪರ್ಕಿಸಲು ತಿಳಿಸಲಾಗಿದೆ.

ನೇಕಾರ ಸಮ್ಮಾನ ಯೋಜನೆಯಡಿ ಆರ್ಥಿಕ ನೆರವನ್ನು ಪಡೆಯಲು ಯಾವುದೇ ಅರ್ಜಿ ಅಥವಾ ಆನ್‌ಲೈನ್ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ ಹಾಗೂ ಯಾವುದೇ ಶುಲ್ಕ ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಈ ಕಛೇರಿ ದೂರವಾಣಿ ಸಂಖ್ಯೆ: 0831–2950674 ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ಜಿಲ್ಲಾ ಪಂಚಾಯತ್ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಕಾರರಿಗೆ ವಿಶೇಷ ಪ್ಯಾಕೇಜ್

ಬೆಳಗಾವಿ: ಜನವರಿ 2022–23ನೇ ಸಾಲಿಗೆ ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಅತಿ ಸಣ್ಣ (ಎಮ್.ಇ) ಘಟಕ ಸ್ಥಾಪನೆಗೆ ಶೇ.50 ರಷ್ಟು ಸಹಾಯಧನ ನೀಡುವ ಹೊಸ ಯೋಜನೆಯನ್ನು ಜಾರಿಗೆ ತರಲಾಗಿದ್ದು, ಈ ಯೋಜನೆಗೆ ಸಂಬಂಧಿಸಿದಂತೆ ಬೆಳಗಾವಿ ಜಿಲ್ಲೆಗೆ ಭೌತಿಕ–3 ಆರ್ಥಿಕ 60. ಲಕ್ಷ ಗುರಿ ನಿಗದಿಪಡಿಸಲಾಗಿರುತ್ತದೆ.

ಆಸಕ್ತ ಸಾಮಾನ್ಯ ವರ್ಗದ ನೇಕಾರರು ಉದ್ದಿಮೆದಾರರು ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಅತಿ ಸಣ್ಣ (ಎಮ್.ಇ) ಘಟಕ ಸ್ಥಾಪಿಸಲು ಪ್ರಸ್ತಾವನೆಯನ್ನು ಸಲ್ಲಿಸಬಹುದಾಗಿರುತ್ತದೆ.

ಸದರಿ ಯೋಜನೆಯ ಸರ್ಕಾರದ ಆದೇಶ ಸಂಖ್ಯೆ: CI 105 ಎಂಐಜ 2022 ಬೆಂಗಳೂರು, ಡಿಸಂಬರ್.21 2022 ರನ್ವಯ ಪರಿಪೂರ್ಣ ದಾಖಲಾತಿಗಳೊಂದಿಗೆ ಮೊದಲು ಸಲ್ಲಿಸುವ ಪ್ರಸ್ತಾವನೆಗಳಿಗೆ ಮೊದಲ ಆದ್ಯತೆ ಮೇರೆಗೆ ಆಯವ್ಯಯದ ಮಿತಿಗೆ ಒಳಪಟ್ಟು ಅನುಮೋದನೆಗಾಗಿ ಮಾನ್ಯ ಜವಳಿ ಅಭಿವೃದ್ಧಿ ಆಯುಕ್ತರು, ಬೆಂಗಳೂರು ಇವರಿಗೆ ಶಿಫಾರಸ್ಸು ಮಾಡಲಾಗುವುದು. ಫೆಬ್ರುವರಿ 13, 2023 ಒಳಗಾಗಿ ಪ್ರಸ್ತಾವನೆಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಛೇರಿ ಹಾಗೂ ಕಛೇರಿ ದೂರವಾಣಿ ಸಂಖ್ಯೆ: 0831–2950674 ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ಜಿಲ್ಲಾ ಪಂಚಾಯತ್ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಷ್ಠರೋಗಕ್ಕೆ ಭಯಪಡುವ ಅಗತ್ಯವಿಲ್ಲ: ಡಾ.ಮಹೇಶ್ ಕೋಣಿ

ಬೆಳಗಾವಿ: ಕುಷ್ಠರೋಗವು ಒಂದು ಮೈಕ್ರೊ ಬ್ಯಾಕ್ಟಿರಿಯ ಲೇಪ್ರೆ ಎಂಬ ರೋಗಾಣುವಿನಿಂದ ಸಾಂಕ್ರಾಮಿಕ ರೋಗವಾಗಿದ್ದು ಸಾರ್ವಜನಿಕರು ಇದಕ್ಕೆ ಭಯ ಪಡುವ ಅಗತ್ಯವಿಲ್ಲ ಎಂದು ಬೆಳಗಾವಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಮಹೇಶ ಕೋಣಿ ಹೇಳಿದರು.



"ಸ್ಪರ್ಶ" ಕುಷ್ಠರೋಗ ಜಾಗೃತಿ ಅರಿವು ಆಂದೋಲನ-2023 ರ ಅಂಗವಾಗಿ ಜನೇವರಿ 30 ರಿಂದ ಫೆಬ್ರುವರಿ-13ರ ವರೆಗೆ ನಡೆಯಲಿರುವ ಅಭಿಯಾನಕ್ಕೆ ಜಿಲ್ಲಾ ಕುಷ್ಠರೋಗ ನಿಯಂತ್ರಣ ವಿಭಾಗ ಆವರಣದಲ್ಲಿ ಸೋಮವಾರ(ಜ.30) ಚಾಲನೆ ನೀಡಿ, "ಕುಷ್ಠರೋಗದ ವಿರುದ್ಧ ಹೋರಾಡೋಣ ಮತ್ತು ಕುಷ್ಠರೋಗವನ್ನು ಇತಿಹಾಸವಾಗಿಸೋಣ" ಎಂಬ ಘೋಷಣೆಯೊಂದಿಗೆ ಬಿತ್ತಿ ಪ್ರತಗಳು, ಕರಪತ್ರಗಳು, ಬ್ಯಾನರ್‌ಗಳನ್ನು ಬಿಡುಗ-ಡೆಗೊಳಿಸಿ ಅವರು ಮಾತನಾಡಿದರು.

ಕುಷ್ಠರೋಗಕ್ಕೆ ಎಲ್ಲ ಸರ್ಕಾರಿ ಆಸ್ಪತ್ರೆಗಳು ಬಹು ಔಷಧಿ ಚಿಕಿತ್ಸೆ ಉಚಿತವಾಗಿ ಸಿಗುತ್ತದೆ. ಹಾಗೂ ಸಂಪೂರ್ಣವಾಗಿ ಗುಣಹೊಂದುತ್ತದೆ. ಕುಷ್ಠರೋಗದಿಂದ ಉಂಟಾಗುವ ಅಂಗವಿಕಲತೆಗಳ ಬಗ್ಗೆ ನೆರೆ-ಹೊರೆ ವ್ಯಕ್ತಿಗಳಿಗೆ ಸೂಕ್ತ ತಿಳುವಳಿಕೆ ಅವಶ್ಯಕ ಚಿಕಿತ್ಸೆ ನೀಡುವಾಗ ಬೇಧ ಭಾವ ಮಾಡದೆ ಗೌರವಯುತವಾಗಿ ಉಪಚರಿಸಿ ರೋಗಿ ಗುಣಮುಖಹೊಂದಲು ಸಹಕರಿಸಿ ಸಮಾಜದಲ್ಲಿ ರೋಗದ ಬಗ್ಗೆ ಸೂಕ್ತ ತಿಳುವಳಿಕೆ ನೀಡಿ ಪ್ರಾರಂಭದ ಹಂತದಲ್ಲಿ ರೋಗ ಪತ್ತೆ ಮಾಡಿ ಬಹುಔಷಧಿ ಚಿಕಿತ್ಸೆ ಪಡೆಯುವುದರಿಂದ ಸಂಪೂರ್ಣವಾಗಿ ಗುಣಮುಖರಾಗುವುದಲ್ಲದೆ ಮುಂದಾಗಬಹುದಾದ ವಿಕಲಾಂಗತೆಯನ್ನು ಕೂಡ ತಡೆಗಟ್ಟಬಹುದು. ಇದಕ್ಕೆಲ್ಲಾ ಮಿಗಿಲಾಗಿ ಸಮಾಜದಲ್ಲಿರುವ ನಾವೆಲ್ಲರೂ ಒಗ್ಗಟಾಗಿ ಈ ದಿಸೆಯಲ್ಲಿ ಕೆಲಸ ಮಾಡಿದರೆ ಗಾಂಧೀಜಿಯವರ ಕನಸು "ಕುಷ್ಠರೋಗ ಮುಕ್ತ ಭಾರತ" ವನ್ನು ನಿರ್ಮಿಸಬಹುದಾಗಿದೆ ಎಂದು ಹೇಳಿದರು.

ಜಿಲ್ಲಾ ಕುಷ್ಠರೋಗ ನಿಯಂತ್ರಣ ಅಧಿಕಾರಿಗಳಾದ ಡಾ.ಚಾಂದಿನಿ ಜಿ. ದೇವಡಿ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ ರಾಜ್ಯ ಇಲಾಖೆ, ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಸಮನ್ವಯದೊಂದಿಗೆ ಸದರಿ ಕಾರ್ಯಕ್ರಮವನ್ನು ಜನೇವರಿ 30ರ ಎಲ್ಲ ಗ್ರಾಮ ಪಂಚಾಯತ ಮತ್ತು ಪುರಸಭೆಗಳಲ್ಲಿ ಸಂಬಂಧಪಟ್ಟ ಅಧ್ಯಕ್ಷರ, ಅಧ್ಯಕ್ಷತೆಯಲ್ಲಿ ಕುಷ್ಠರೋಗ ನಿವಾರಿಸಲು "ಕುಷ್ಠರೋಗದ ವಿರುದ್ಧ ಹೋರಾಡೋಣ ಮತ್ತು ಕುಷ್ಠರೋಗವನ್ನು ಇತಿಹಾಸವಾಗಿಸೋಣ" ಎಂಬ ಘೋಷಣೆಯೊಂದಿಗೆ ಸದಸ್ಯರುಗಳು ಮತ್ತು ಸಾರ್ವಜನಿಕರು ಸಮೂಹದಲ್ಲಿ ಪ್ರತಿಜ್ಞೆ ಮಾಡುವುದು.


ಸಾರ್ವಜನಿಕರಲ್ಲಿ ಕುಷ್ಠರೋಗದ ಬಗ್ಗೆ ಇರುವ ಅವೈಜ್ಞಾನಿಕ ನಂಬಿಕೆಗಳನ್ನು ಹೋಗಲಾಡಿಸಿ ಈ ಖಾಯಿಲೆಯ ಇತ-ರೆ ಖಾಯಿಲೆಗಳಂತೆ ಒಂದು ಸಾಮಾನ್ಯ ಖಾಯಿಲೆಯಾಗಿದ್ದು ಬಹು ಔಷಧಿ ಚಿಕಿತ್ಸೆ ವಿದಾನದ ಮೂಲಕ ಕುಷ್ಠರೋಗವನ್ನು ಸಂಪೂರ್ಣವಾಗಿ ಗುಣಪಡಿಸಬಹುದೆಂದು ಸಮೂದಾಯದಲ್ಲಿ ಅರಿವು ಮೂಡಿಸಲು ಈ ಪಾಕ್ಷಿಕ ಆಚರಣೆ ಮುಖ್ಯ ಉದ್ದೇಶವಾಗಿರುತ್ತದೆ ಎಂದರು.

ಬೆಳಗಾವಿ ತಾಲೂಕ ಆರೋಗ್ಯ ಅಧಿಕಾರಿಗಳಾದ ಡಾ.ಶಿವಾನಂದ ಮಾಸ್ತಿಹೊಳಿ ಮಾತನಾಡಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಕುಷ್ಠರೋಗ ನಿರ್ಮೂಲನೆ ಅಂದರೆ ಸ್ಥಾನಿಕತೆ ಹತ್ತು ಸಾವಿರ ಜನಸಂಖ್ಯೆಗೆ 01 ಕ್ಕಿಂತ ಕಡಿಮೆ ಮಾಡುವುದು ಕುಷ್ಠರೋಗದ ಪಿಡಿತ ವ್ಯಕ್ತಿಗಳಿಗೆ ಅಂಗವಿಕಲತೆ ತಡೆಗಟ್ಟುವುದು ಮತ್ತು ವೈದ್ಯಕೀಯ ಪುನರ್ಮನನ ವ್ಯವಸ್ಥೆಯನ್ನು ಬಲಪಡಿಸುವುದು ಕುಷ್ಠರೋಗ ಜೊತೆಗೂಡಿರುವ ಸಮಾಜಿಕ ಪಿಡುಗನ್ನು ಕಡಿಮೆ ಮಾಡುವುದು ಉದ್ದೇಶ ಹೊಂದಿದ್ದು, ಕುಷ್ಠರೋಗಕ್ಕೆ ಸಂಬಂಧಿಸಿದ ಮಾಹಿತಿಯನ್ನು ಜನ ಸಾಮಾನ್ಯರಿಗೆ ಜನಪ್ರತಿನಿಧಿಗಳ ಮುಖಾಂತರ ತಿಳಿಸಲಾಗುತ್ತದೆ.

ಜಿಲ್ಲಾ ಮತ್ತು ತಾಲೂಕೂ ಮಟ್ಟದಲ್ಲಿ ಮತ್ತು ಹೊಬಳಿ ಗ್ರಾಮ ಮಟ್ಟದಲ್ಲಿ ಜನ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಂಡು ಜನರಿಗೆ ಹೆಚ್ಚಿನ ಅರಿವು ಮೂಡಿಸಲಾಗುವುದು. ಸದರಿ ಪಾಕ್ಷಿಕ ಕಾರ್ಯಕ್ರಮವನ್ನು ಮನೆ ಮನೆಗೆ ಭೇಟಿ ನೀಡಿ ಆಶಾ ಕಾರ್ಯಕರ್ತೆಯರು, ಸುರಕ್ಷಣಾಧಿಕಾರಿಗಳು, ನಿರೀಕ್ಷಣಾಧಿಕಾರಿಗಳು ಕುಷ್ಠರೋಗ ಲಕ್ಷಣಗಳಿದ್ದವರಿಗೆ ಪತ್ತೆ ಹಚ್ಚಿ ರೋಗ ಖಚಿತವಾದ ಬಳಿಕ ಬಹು ಔಷಧಿ ಚಿಕಿತ್ಸೆ ಪ್ರಾರಂಭಿಸಲಾಗುವುದು ಎಂದು ಹೆಳಿದರು.

ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳಾದ ಡಾ.ಬಿ.ಎನ್ ತುಕ್ಕಾರ, ಡಾ.ಎಮ್.ಎಸ್. ಪಲ್ಲೇದ, ಡಾ. ಅನೀಲ ಕೊರಬು, ಶ್ರೀ. ಶಿವಾಜಿ ಮಾಳಗನ್ನವರ, ವೈದ್ಯಾಧಿಕಾರಿ ಡಾ. ಪ್ರಕಾಶ ವಾಲಿ, ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಬಿಜೆಪಿ ನಾಯಕರ ವಿರುದ್ಧ ಕಾಂಗ್ರೆಸ್ ನಿಯೋಗ ದೂರು



ಬೆಂಗಳೂರು: ರಮೇಶ್ ಜಾರಕಿಹೊಳಿ ಹಾಗೂ ಬಿಜೆಪಿ ಇತರ ನಾಯಕರ ವಿರುದ್ಧ ಕಾಂಗ್ರೆಸ್ ನಾಯಕರ ನಿಯೋಗ ಕೇಂದ್ರ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿದೆ.

ಕೆಪಿಸಿಸಿ ಕಾರ್ಯಾಧ್ಯಕ್ಷ ರಾಮಲಿಂಗಾ ರೆಡ್ಡಿ, ಮಾಜಿ ಸಂಸದ ವಿ.ಎಸ್ ಉಗ್ರಪ್ಪ, ಶಾಸಕ ರಿಜ್ವಾನ್ ಅರ್ಷದ್ ನೇತೃತ್ವದ ನಿಯೋಗದಿಂದ ಬೆಂಗಳೂರಿನಲ್ಲಿ ದೂರು ಸಲ್ಲಿಸಿದೆ.

ಬಿಜೆಪಿಯ ಚುನಾವಣಾ ಅಕ್ರಮಗಳ ಕುರಿತು ದೂರು ನೀಡಿದ 'ಕೈ' ಪಡೆ, ಮಾಜಿ ಸಚಿವ ರಮೇಶ್ ಜಾರಕಿಹೊಳಿ ಹೇಳಿಕೆಯನ್ನ ಅಸ್ತ್ರ ಮಾಡಿಕೊಂಡಿದೆ. 'ಪ್ರತಿಯೊಬ್ಬ ಮತದಾರನಿಗೆ 6 ಸಾವಿರ ನೀಡಿ ಮತ ಕೇಳಲಾಗುವುದು' ಎಂದಿದ್ದ ರಮೇಶ್ ಜಾರಕಿಹೊಳಿ ವಿರುದ್ಧ ಕ್ರಮ ಕೈಗೊಳ್ಳಲು ಒತ್ತಾಯಿಸಿದೆ.

ಇದರೊಂದಿಗೆ ರಾಜ್ಯದ 5 ಕೋಟಿ ಮತದಾರರನ್ನ 30 ಸಾವಿರ ಕೋಟಿಗೆ ಖರೀದಿಸಲು ಬಿಜೆಪಿ ಸಂಚು ರೂಪಿಸಿದೆ. ಈ ಸಂಚಿಗೆ ಸಿಎಂ ಬೊಮ್ಮಾಯಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ, ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಸಹ ಪ್ರೇರಣೆ ನೀಡಿದ್ದಾರೆ. ಹಾಗಾಗಿ ಕೂಡಲೇ ಈ ಪ್ರಕರಣದ ಬಗ್ಗೆ ತನಿಖೆ ನಡೆಯಬೇಕು ಎಂದು ಆಗ್ರಹಿಸಿದ್ದಾರೆ.

ಇದೇ ಸಂದರ್ಭದಲ್ಲಿ ಶಿವಾಜಿನಗರದಲ್ಲಿ 9 ಸಾವಿರ ಮತದಾರರ ಹೆಸರು ಡಿಲಿಟ್ ಆಗಿರುವ ಬಗ್ಗೆ ಶಿವಾಜಿನಗರದ ಶಾಸಕ ರಿಜ್ವಾನ್ ಅರ್ಷದ್ ರಿಂದ ಚುನಾವಣಾ ಆಯೋಗಕ್ಕೆ ಮತ್ತೊಂದು ದೂರು ಸಲ್ಲಿಸಲಾಯಿತು.

# ಡಾ.ಬಾಬಾಸಾಹೇಬ ಅಂಬೇಡ್ಕರ್ ಭವನ ಉದ್ಘಾಟನೆ




ಬೆಳಗಾವಿ: ಬೆಳಗಾವಿಯ ಸಹ್ಯಾದ್ರಿ ನಗರದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಮಹಾನ್ ಮಾನವತಾವಾದಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಭವನದ ಉದ್ಘಾಟನೆಯನ್ನು ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಭಾನುವಾರ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬರ ಆದರ್ಶಗಳು ಪ್ರತಿಯೊಬ್ಬ ವ್ಯಕ್ತಿಯ ಜೀವನಕ್ಕೆ ಮಾರ್ಗದರ್ಶಿ, ಅವರೊಬ್ಬ ವ್ಯಕ್ತಿಯಲ್ಲ ದೊಡ್ಡಶಕ್ತಿ. ಸರ್ವರೂ ಆರಾಧಿಸುವ ಸರಳತೆಯ ಜ್ಞಾನಿ. ಜಗತ್ತಿನಲ್ಲೇ ಮಾದರಿ ಹಾಗೂ ಅತ್ಯಂತ ಶ್ರೆ?ಷ್ಠ ಸಂವಿಧಾನವನ್ನು ರಾಷ್ಟ್ರಕ್ಕೆ ಸಮರ್ಪಣೆ ಮಾಡಿದ್ದಾರೆ. ಭಾರತದಂತಹ ಬೃಹತ್ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಅಂಬೇಡ್ಕರ್ ಅವರು ಬರೆದಿರುವ ಸಂವಿಧಾನವನ್ನು ಉಳಿಸಿಕೊಳ್ಳುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು.

ಅಂಬೇಡ್ಕರ್ ಅವರ ಆದರ್ಶಗಳು ಸಾರ್ವಕಾಲಿಕವಾದವುಗಳು. ಅವುಗಳನ್ನು ನಮ್ಮ ಮುಂದಿನ ಪೀಳಿಗೆಗೆ ದಾಟಿಸಬೇಕಾದ ಕರ್ತವ್ಯ ನಮ್ಮದು. ಅವರ ಹೆಸರಿನಲ್ಲಿ ನಿರ್ಮಾಣವಾಗಿರುವ ಈ ಸಮುದಾಯ ಭವನ ಉದ್ಘಾಟಿಸುತ್ತಿರುವುದು ನನ್ನ ಪಾಲಿನ ಭಾಗ್ಯವೇ ಸರಿ ಎಂದು ಹೆಬ್ಬಾಳಕರ್ ಹೇಳಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಭಾಗ್ಯಶ್ರೀ ಹುಗ್ಗಿ, ಎಂ ಜೆ ಮಂಕಾಳೆ, ಡಾ. ಸಾವುಕಾರ ಕಾಂಬಳೆ, ಡಾ. ಎಚ್ ಬಿ ಕೋಲ್ಕಾರ, ಅಶೋಕ ನಿಂಗಪ್ಪಗೋಳ, ವಿಜಯಕುಮಾರ ಹತ್ತಿ, ಎಸ್ ಡಿ ಕಾಂಬಳೆ, ನಾಮದೇವ ಹತ್ತಿ ಹಾಗೂ ಮುಂತಾದವರು ಉಪಸ್ಥಿತರಿದ್ದರು.

# ದಾಖಲೆ ಬರೆದ ನಟ ದರ್ಶನ್ ಅಭಿನಯದ 'ಕ್ರಾಂತಿ' ಸಿನಿಮಾ



ಬೆಂಗಳೂರು: ಬಿಡುಗಡೆಗೂ ಮುನ್ನವೇ ಭಾರಿ ಸದ್ದು ಮಾಡಿದ್ದ ನಟ ದರ್ಶನ್ ಅಭಿನಯದ ಕ್ರಾಂತಿ ಸಿನಿಮಾ, ಬಿಡುಗಡೆಯ ನಂತರವೂ ಸದ್ದು ಮಾಡುತ್ತಲೇ ಇದೆ. ಗಣರಾಜ್ಯೋತ್ಸವದಂದು (ಜ. 26) ಬಿಡುಗಡೆಯಾದ ಈ ಚಿತ್ರವು 100 ಕೋಟಿ ಕ್ಲಬ್ ಪಟ್ಟಿಗೆ ಸೇರಿದೆ ಎಂದು ವರದಿಯಾಗಿದೆ.

ನಮ್ಮ ಮೂಲಗಳ ಪ್ರಕಾರ, ಕಮರ್ಷಿಯಲ್ ಎಂಟರ್‌ಟೈನರ್ ಕ್ರಾಂತಿ ಬಾಕ್ಸ್ ಆಫೀಸ್‌ನಲ್ಲಿ ಅಧಿಕೃತವಾಗಿ 100 ಕೋಟಿ ರೂಪಾಯಿಗಳಿಗೂ ಅಧಿಕ ಗಳಿಕೆ ಕಂಡಿದೆ. ಅಲ್ಲದೆ, ಇದರ ಸ್ಯಾಟಲೈಟ್ ಮತ್ತು ಡಿಜಿಟಲ್ ಹಕ್ಕುಗಳು ಕೂಡ ಭಾರಿ ಬೆಲೆಗೆ ಮಾರಾಟವಾಗಿವೆ ಎನ್ನಲಾಗಿದೆ. ಈನಡುವೆ ಥಿಯೇಟರ್‌ಗಳಲ್ಲಿಯೂ ಗಳಿಕೆ ಕಾಣುತ್ತಲೇ ಸಾಗಿದೆ.

ವಿ ಹರಿಕೃಷ್ಣ ಬರೆದು ನಿರ್ದೇಶಿಸಿರುವ ಕ್ರಾಂತಿಯು ಫ್ಯಾಮಿಲಿ ಎಂಟರ್‌ಟೈನರ್ ಆಗಿದ್ದು, ಸರ್ಕಾರಿ ಶಾಲೆಗಳನ್ನು ರಕ್ಷಿಸುವ ಬಲವಾದ ಸಂದೇಶವನ್ನು ಹೊಂದಿರುವ ಮಾಸ್ ಮಿಶ್ರಣವಾಗಿದೆ.

ಚಿತ್ರದ ಫಲಿತಾಂಶದ ಬಗ್ಗೆ ಸಂತಸ ವ್ಯಕ್ತಪಡಿಸಿರುವ ನಿರ್ಮಾಪಕಿ ಶೈಲಜಾ ನಾಗ್, ದರ್ಶನ್ ಅವರ ಮಾಸ್ ಫ್ಯಾನ್ ಫಾಲೋಯಿಂಗ್ ಚಿತ್ರವು ರಾಜ್ಯದಾದ್ಯಂತ ಸಿಂಗಲ್ ಥಿಯೇಟರ್‌ಗಳಲ್ಲಿ ಅಸಾಧಾರಣ ಹಿಟ್ ಆಗಲು ಸಹಾಯ ಮಾಡಿದೆ ಮತ್ತು ಮಲ್ಟಿಪ್ಲೆಕ್ಸ್‌ಗಳಲ್ಲಿಯೂ ಸಹ ಪ್ರೇಕ್ಷಕರನ್ನು ಕರೆತರುವಲ್ಲಿ ಯಶಸ್ವಿಯಾಗಿದೆ ಎಂದು ಹೇಳಿದರು.

# ಪ್ರಚಾರಕ್ಕಿಂತ ಅಭಿವೃದ್ಧಿಗೆ ನಮ್ಮ ಆದ್ಯತೆ



ಯಮಕನಮರಡಿ: ಮತಕ್ಷೇತ್ರದಲ್ಲಿ ಕಳೆದ 15 ವರ್ಷದ ಅವಧಿಯಲ್ಲಿ ನೂರು ಕೆಲಸಗಳನ್ನು ಮಾಡಿದರೂ ನಾವು ಪ್ರಚಾರ ಪಡೆಯಲಿಲ್ಲ. ಆದರೆ ನಮ್ಮ ವಿರೋಧಿಗಳು ಕೆಲಸ ಆರಂಭಕ್ಕೂ ಮುನ್ನವೇ ನೂರು ಬಾರಿ ಪ್ರಚಾರ ಪಡೆಯುತ್ತಿದ್ದಾರೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಯಮಕನಮರಡಿ ಮತಕ್ಷೇತ್ರದ ಮನಗುತ್ತಿ ಗ್ರಾಮದಲ್ಲಿ 40 ಲಕ್ಷ ರೂ. ವೆಚ್ಚದ ಸಿಸಿ ರಸ್ತೆ ಕಾಮಗಾರಿಗಳಿಗೆ ಚಾಲನೆ ನೀಡಿ, ನೂತನವಾಗಿ ನಿರ್ಮಿಸಿದ್ದ ಎರಡು ಅಂಗನವಾಡಿ ಕೇಂದ್ರಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಚಾರಕ್ಕಿಂತ ಅಭಿವೃದ್ಧಿಯೇ ನಮಗೆ ಮುಖ್ಯವೆಂದು ತಿಳಿಸಿದರು.

ಕ್ಷೇತ್ರದಲ್ಲಿ ನೀರಾವರಿ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡಿದ್ದು, ರೈತರು ಕಬ್ಬು ಬೆಳೆದು ಆರ್ಥಿಕವಾಗಿ ಪ್ರಗತಿ ಕಾಣುತ್ತಿದ್ದಾರೆ. ಇನ್ನು ಅನೇಕ ನೀರಾವರಿ ಯೋಜನೆಗಳನ್ನು ಕಾರ್ಯ ರೂಪಕ್ಕೆ ತರುವ ಉದ್ದೇಶವಿದೆ. ಕಾರಣ ತಾವುಗಳು ಇನ್ನೊಮ್ಮೆ ಅಧಿಕಾರ ನೀಡಬೇಕೆಂದು ತಿಳಿಸಿದರು.

ಬಳಿಕ ಮೋದಗಾ ಗ್ರಾಮದಲ್ಲಿ ಜರುಗಲಿರುವ ಭಾವೇಶ್ವರಿ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಎಲ್ಲ ರೀತಿಯ ಸಹಾಯ-ಸಹಕಾರ ನೀಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಕಿರಣ ರಜಪೂತ, ಮನಗುತ್ತಿ ಗ್ರಾಮದ ಗುರು-ಹಿರಿಯರು ಸೇರಿದಂತೆ ಮಹಿಳೆಯರು ಇದ್ದರು.

# ಕಾರು ಡಿಕ್ಕಿ: ಸ್ಥಳದಲ್ಲೇ 30 ಕುರಿಗಳು ಸಾವು



ರಾಯಚೂರು: ನಗರದ ಹೊರವಲಯದ ಲಿಂಗಸುಗೂರು ರಸ್ತೆ ಬೈಪಾಸ್ ನಲ್ಲಿ ರಸ್ತೆ ಪಕ್ಕ ನಿಲ್ಲಿಸಿದ್ದ ಕುರಿಗಳಿಗೆ ಕಾರು ಡಿಕ್ಕಿ ಹೊಡೆದು 30 ಕುರಿಗಳು ಸಾವನ್ನಪ್ಪಿದ್ದು, 10 ಕುರಿಗಳ ಕಾಲು ಮುರಿದಿದೆ.

ಕುರಿಗಳಿಗೆ ಡಿಕ್ಕಿ ಹೊಡೆದ ರಭಸಕ್ಕೆ ಕಾರು ನಜ್ಜುಗುಜ್ಜಾಗಿದೆ. ಯಾಪಲದಿನ್ನಿಯ ಜಗನ್ನಾಥ ಎಂಬವರಿಗೆ ಸೇರಿದ ಕುರಿಗಳು ಸಾವನ್ನಪ್ಪಿವೆ. ಯಾಪಲದಿನ್ನಿಯಿಂದ ಕಲ್ಲೂರಿಗೆ ಹೊರಟಿದ್ದ ಕುರಿಗಾಯಿಗಳು, ರಾತ್ರಿ ವೇಳೆ ರಸ್ತೆ ಪಕ್ಕದಲ್ಲಿ ಕುರಿಗಳನ್ನ ನಿಲ್ಲಿಸಿದ್ದರು. ಬೆಳಗ್ಗಿನ ಜಾವ ಅಪಘಾತ ಸಂಭವಿಸಿದ್ದು, 120 ಕುರಿಗಳಲ್ಲಿ 30 ಕುರಿಗಳು ಸಾವನ್ನಪ್ಪಿವೆ.

ಅಪಘಾತದಿಂದ ಸುಮಾರು ಮೂರೂವರೆ ಲಕ್ಷ ರೂಪಾಯಿ ಬೆಲೆ ಬಾಳುವ ಕುರಿಗಳು ಸಾವನ್ನಪ್ಪಿವೆ. ಕಾರಿನಲ್ಲಿದ್ದ ಮೂವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಗೋವಾದಿಂದ ಹೈದರಾಬಾದ್ಗೆ ಹೊರಟಿದ್ದ ಕಾರು ಕುರಿಗಳಿಗೆ ಡಿಕ್ಕಿ ಹೊಡೆದಿದೆ. ಚಾಲಕನ ನಿಯಂತ್ರಣ ತಪ್ಪಿ ಅಪಘಾತ ನಡೆದಿದ್ದು, ರಾಯಚೂರು ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಾವಿತ್ರಿಬಾಯಿ ಪುಲೆ ಪ್ರಶಸ್ತಿ ಪ್ರಧಾನ



ಬೆಳಗಾವಿ: ಗುಳೇದಗುಡ್ಡ ತಾಲೂಕಿನ ರಾಘಾಪುರ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ, ಸಾಹಿತಿ ಅಶ್ವಿನಿ ಅಂಗಡಿ ಅವರಿಗೆ ದೆಹಲಿಯ ಅಖಿಲ ಭಾರತ ದಲಿತ ಸಾಹಿತ್ಯ ಅಕಾಡೆಮಿ ಕರ್ನಾಟಕ ಘಟಕ ನೀಡುವ ಪ್ರಸಕ್ತ ಸಾಲಿನ ಸಾವಿತ್ರಿಬಾಯಿ ಪುಲೆ ಪ್ರಶಸ್ತಿ ನೀಡಲಾಗಿದೆ.

ಇಲ್ಲಿನ ಸವಾಯಿ ಗಂಧರ್ವ ಸಾಹಿತ್ಯ ಭವನದಲ್ಲಿ ಭಾನುವಾರ ಜರುಗಿದ ದಲಿತ ಸಾಹಿತಿಗಳು ಹಾಗೂ ಚಿಂತಕರ ಸಮಾವೇಶದ ಉದ್ಘಾಟನಾ ಸಮಾರಂಭದಲ್ಲಿ ಅಖಿಲ ಭಾರತ ದಲಿತ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಡಾ.ಎಸ್. ಪಿ.ಸುಮನಾಕ್ಷರ ಅವರು ಅಶ್ವಿನಿ ಅಂಗಡಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು.

ಕೆಪಿಸಿಸಿ ಕಾರ್ಯಾಧ್ಯಕ್ಷ, ಮಾಜಿ ಸಚಿವ ಸತೀಶ ಜಾರಕಿಹೊಳಿ ಮುಖ್ಯ ಅತಿಥಿಯಾಗಿಭಾಗವಹಿಸಿದ್ದರು. ಭೂತರಾಮನಹಟ್ಟಿಯ ವಿರಕ್ತಮಠದ ಶ್ರೀ ಶಿವಸಿದ್ಧ ಸೋಮೇಶ್ವರ ಶಿವಾಚಾರ್ಯ ಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು.

ಬಿಡಿಎಸ್ ಎ ರಾಷ್ಟ್ರೀಯ ಸಂಯೋಜಕ ಸುಭಾಷ್ ಕಾನಡೆ, ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಡಾ.ಸಿ.ವೆಂಕಟೇಶ್, ಚಲುವರಾಜು, ಡಾ. ಎಂ. ರಾಮಚಂದ್ರಪ್ಪ, ಬಿಡಿಎಸ್ ಎ ರಾಜ್ಯ ಘಟಕದ ಅಧ್ಯಕ್ಷ ಎಚ್. ಎಂ.ಕುಂದರಗಿ, ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಧುಮಾಳ ಮತ್ತಿತರರು ಉಪಸ್ಥಿತರಿದ್ದರು.

# ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಮೌಲ್ಯಾಧಾರಿತ ಶಿಕ್ಷಣ ನೀಡಲಿ




ಬೆಳಗಾವಿ: "ದೇಶ ಸದೃಢಗೊಂಡು ಪ್ರಗತಿಯತ್ತ ಸಾಗಿ ವಿಶ್ವದಲ್ಲಿ ತನ್ನ ಸ್ಥಾನಮಾನ ಗಟ್ಟಿಗೊಳಿಸಲು ಭಾವೀ ನಾಗರಿಕರಾದ ವಿದ್ಯಾರ್ಥಿಗಳಿಗೆ ಶಿಕ್ಷಣ ಸಂಸ್ಥೆಗಳು ಮೌಲ್ಯಾಧಾರಿತ ಶಿಕ್ಷಣ ನೀಡಬೇಕಿದೆ" ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದರು.

ಹಿರೇ ಬಾಗೇವಾಡಿಯ ಗ್ರುಪ್ ವಿದ್ಯಾವರ್ಧಕ ಸಂಘದ ಕರ್ನಾಟಕ ಸಂಯುಕ್ತ ಪದವಿಪೂರ್ವ ಕಾಲೇಜು, ಕರ್ನಾಟಕ ಬಾಲನಿಕೇತನ ಕನ್ನಡ ಪ್ರಾಥಮಿಕ ಶಾಲೆ ಹಾಗೂ ಬಿ.ಕೆ. ಇಟಗಿ ರಾಷ್ಟ್ರೀಯ ಇಂಗ್ಲಿಷ್ ಮೀಡಿಯಂ ಸ್ಕೂಲ್ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಸನ್ಮಾನ ಸಮಾರಂಭ ಮತ್ತು ಪುರಸ್ಕಾರ ಪ್ರದಾನ ಸಮಾರಂಭದಲ್ಲಿ ಭಾಗಿಯಾಗಿ, ಮಾತನಾಡಿದೆ.

ಉನ್ನತ ವಿಚಾರಗಳನ್ನು ಅವರ ಮನಸ್ಸಿನಲ್ಲಿ ತುಂಬುವ ಮೂಲಕ ನಾವೆಲ್ಲರೂ ಭಾರತಾಂಬೆಯ ಮಕ್ಕಳು, ನಾವೆಲ್ಲರೂ ಒಂದೇ, ವಂದೇ ಮಾತರಂ ಜಯಘೋಷದ ಮಂತ್ರ ಪಠಿಸಬೇಕಾಗಿದೆ ಎಂದು ಅವರು ಹೇಳಿದರು.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ ಅವರು ಈ ಶಿಕ್ಷಣ ಸಂಸ್ಥೆಯ ಮೇಲೆ ಅಪಾರವಾದ ಪ್ರೀತಿ ಕಾಳಜಿಯನ್ನು ಹೊಂದಿದ್ದಾರೆ. ಈ ಗ್ರಾಮದ ಎಲ್ಲ ಜನಪ್ರತಿನಿಧಿಗಳು ಈ ಭಾಗದ ಶಾಸಕರೊಂದಿಗೆ ಒಳ್ಳೆಯ ಸಂಬಂಧವನ್ನು ಹೊಂದಿದ್ದು, ಶಿಕ್ಷಣ ಸಂಸ್ಥೆಯ ಅಭಿವೃದ್ಧಿಗಾಗಿ ಮುಂಬರುವ ದಿನಗಳಲ್ಲಿ ಹೊಸ ಹೊಸ ಯೋಜನೆಗಳನ್ನು ಕೈಗೊಳ್ಳಲಿದ್ದಾರೆ" ಎಂದು ಚನ್ನರಾಜ ಹಟ್ಟಿಹೊಳಿ ಹೇಳಿದರು. ಮುಂಬರುವ ದಿನಗಳಲ್ಲಿ ಗ್ರಾಮೀಣ ಭಾಗದಲ್ಲಿ ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡುವ ನಿಟ್ಟಿನಲ್ಲಿ ವ್ಯವಸ್ಥೆಯ ಸುಧಾರಣೆಗೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಅವರು ವಾಗ್ದಾನ ಮಾಡಿದರು.

ಬಡೇಕೊಳ್ಳ ಮಠದ ಸದ್ಗುರು ಶ್ರೀ ನಾಗೇಂದ್ರ ಮಹಾಸ್ವಾಮಿಗಳು ಹಾಗೂ ತಾರೀಹಾಳದ ಶ್ರೀ ಅಡವೀಶ್ವರ ದೇವರು ಸಾನ್ನಿಧ್ಯ ವಹಿಸಿದ್ದರು. ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರು, ಗ್ರುಪ್ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಹಾಗೂ ನಿರ್ದೇಶಕ ಎಸ್.ಬಿ.ಇಟಗಿ, ಬಿ.ಜಿ.ವಾಲಿಇಟಗಿ, ಸುರೇಶ ಬ. ಇಟಗಿ, ನಸ್ರೀನ್ ಬಾನು ಕರಿದಾವಲ್, ಬಿ.ಡಿ.ಗಣಾಚಾರಿ ಹಾಗೂ ಶಿಕ್ಷಣ ಸಂಸ್ಥೆಯ ಎಲ್ಲ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಗ್ಯಾಸ್ ಗೀಸರ್ ಸೋರಿಕೆ: ಉಸಿರುಗಟ್ಟಿ ಮಹಿಳೆ ಸಾವು



ನವದೆಹಲಿ: ಉತ್ತರ ಪ್ರದೇಶದ ಮೀರತ್ ನಗರದಲ್ಲಿ ಗ್ಯಾಸ್ ಗೀಸರ್ ಸೋರಿಕೆಯಿಂದ ಉಸಿರುಗಟ್ಟಿ ನವ ವಧು ಸಾವನ್ನಪ್ಪಿರುವ ಆಘಾತಕಾರಿ ಘಟನೆ ನಡೆದಿದೆ. ಮದುವೆಯಾದ ಮರುದಿನವೇ ಈ ಘಟನೆ ನಡೆದಿದೆ.

ಮಹಿಳೆ ಸ್ನಾನ ಮಾಡಲು ತನ್ನ ಅತ್ತೆಯ ಮನೆಯಲ್ಲಿ ಸ್ನಾನಗೃಹಕ್ಕೆ ಹೋಗಿದ್ದಳು ಮತ್ತು ಸ್ವಲ್ಪ ಸಮಯದವರೆಗೆ ಅಲ್ಲಿಯೇ ಇದ್ದಳು.

ಎಷ್ಟೊತ್ತಾದರೂ ಆಕೆ ಹೊರ ಬಾರದ ಕಾರಣ ಅನುಮಾನಗೊಂಡ ಕುಟುಂಬಸ್ಥರು ಬಾಗಿಲು ತಟ್ಟಿದ್ದಾರೆ.

ಆದ್ರೆ, ಆಕೆ ಯಾವುದೇ ಪ್ರತಿಕ್ರಿಯೆ ನೀಡದಿದ್ದಾಗ ಕುಟುಂಬಸ್ಥರು ಬಾಗಿಲು ತೆರೆದು ನೋಡಿದಾಗ ಮಹಿಳೆ ಮೂಲೆಯಲ್ಲಿ ಪ್ರಜ್ಞಾಹೀನಳಾಗಿ ಬಿದ್ದಿರುವುದನ್ನು ನೋಡಿದ್ದಾರೆ.

ಕೂಡಲೇ ಆಕೆಯನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ, ಆಕೆ ಆಗಲೇ ಮೃತಪಟ್ಟಿರುವುದಾಗಿ ವೈದ್ಯರು ದೃಢಪಡಿಸಿದ್ದಾರೆ.

# ಹೆಚ್ಚುವರಿ ಬಸ್ ಸೌಲಭ್ಯ

ಬೆಳಗಾವಿ : ಫೆಬ್ರುವರಿ 2. 2023 ರಿಂದ ಫೆ.8 ರ ವರೆಗೆ ನಡೆಯಲಿರುವ ಯಲ್ಲಮ್ಮಾದೇವಿ(ಭಾರತ ಹುಣ್ಣಿಮೆ) ಜಾತ್ರೆ, ಫೆ.4 ರಿಂದ 8 ರ ವರೆಗೆ ನಡೆಯಲಿರುವ ಚನ್ನಬಸವೇಶ್ವರ ಉಳವಿ ಜಾತ್ರೆ ಹಾಗೂ ಫೆ.5 ರಿಂದ 8ರ ವರೆಗೆ ನಡೆಯಲಿರುವ ಭಾವೇಶ್ವರಿ ದೇವಿ ಮೋಹನಗಾ ದಡ್ಡಿ ಜಾತ್ರೆ ಅಂಗವಾಗಿ ಬೆಳಗಾವಿ ಕೇಂದ್ರ/ನಗರ ಮತ್ತು ಬೈಲಹೊಂಗಲ ಬಸ್ ನಿಲ್ದಾಣಗಳಿಂದ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಲಾಗಿದೆ.

ಸಾರ್ವಜನಿಕ ಪ್ರಯಾಣಿಕರಿಗೆ ಉತ್ತಮ ಸಾರಿಗೆ ಸೌಲಭ್ಯ ಒದಗಿಸುವ ದೃಷ್ಟಿಯಿಂದ ಸದರಿ ಜಾತ್ರಾ ಅವಧಿಯಲ್ಲಿ ಬೆಳಗಾವಿ ಕೇಂದ್ರ/ನಗರ ಬಸ್ ನಿಲ್ದಾಣ, ಬೈಲಹೊಂಗಲ ಬಸ್ ನಿಲ್ದಾಣ, ಯಲ್ಲಮ್ಮನ ಗುಡ್ಡ, ಉಳವಿ, ಹಾಗೂ ದಡ್ಡಿಯಲ್ಲಿ ಜಾತ್ರಾ ಬಿಂದು ಸ್ಥಾಪಿಸಿ ಕೆ.ಎಸ್.ಟಿ ಪೇದೆ ರವರನ್ನು ನಿಯೋಜಿಸಿ, ವಾಹನಗಳ ಸುಗಮ ಕಾರ್ಯಾಚರಣೆಗೆ ಕ್ರಮ ಕೈಗೊಳ್ಳಲಾಗಿದೆ.

ಸಾರ್ವಜನಿಕ ಪ್ರಯಾಣಿಕರು ತಂಡಗಳ ರೂಪದಲ್ಲಿ ಪ್ರಯಾಣಿಸಲು ಇಚ್ಛಿಸಿದಲ್ಲಿ, ಸಾಂಧರ್ಬಿಕ ಒಪ್ಪಂದದ ಮೇಲೆ ವಾಹನಗಳನ್ನು ಒದಗಿಸಲಾಗುವುದು. ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಮೋಬೈಲ ಸಂ-7760991625 (ಘ.ವ್ಯ ಬೆಳಗಾವಿ-1) & 7760991627(ಘ.ವ್ಯ ಬೆಳಗಾವಿ-3) ರವರನ್ನು ಸಂಪರ್ಕಿಸಬಹುದು ಎಂದು ವಾಕರಸಾಸಂಸ್ಥೆ, ವಿಭಾಗೀಯ ನಿಯಂತ್ರಣಾಧಿಕಾರಿ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೌಜಲಗಿ ಹೊಸ ತಾಲೂಕು ರಚನಗೆ ಸಂಪೂರ್ಣ ಬೆಂಬಲ: ಶಾಸಕ ಬಾಲಚಂದ್ರ ಜಾರಕಿಹೊಳಿ

ಗೋಕಾಕ: ಕೌಜಲಗಿ ಹೊಸ ತಾಲೂಕು ರಚನೆಗೆ ನನ್ನ ಸಂಪೂರ್ಣ ಬೆಂಬಲ ಇದೆ ಎಂದು ಅರಭಾವಿ ಶಾಸಕ, ಕೆಎಮ್‌ಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.



ತಾಲೂಕಿನ ಕೌಜಲಗಿ ಗ್ರಾಮದ ಬಲಭೀಮ ದೇವಸ್ಥಾನದ ಆವರಣದಲ್ಲಿ ತಾಲೂಕು ರಚನೆಗೆ ಸಂಬಂಧ ಜರುಗಿದ ಪೂರ್ವಭಾವಿ ಸಭೆಯಲ್ಲಿ ನಿಯೋಜಿತ ಕೌಜಲಗಿ ತಾಲೂಕು ಹೋರಾಟ ಚಾಲನಾ ಸಮಿತಿಯವರಿಂದ ಮನವಿ ಸ್ವೀಕರಿಸಿ ಮಾತನಾಡಿದ ಅವರು, ಕಳೆದ 30 ವರ್ಷಗಳಿಂದ ತಾಲೂಕು ಸಂಬಂಧ ಹೋರಾಟ ಮಾಡಿಕೊಂಡು ಬರುತ್ತಿರುವ ಚಾಲನಾ ಸಮಿತಿಗೆ ಸಂಪೂರ್ಣ ಬೆಂಬಲ ಘೋಷಿಸಿದರು.

ಕೌಜಲಗಿ ಹೊಸ ತಾಲೂಕು ಆಗಬೇಕೆಂಬುವುದು ಈ ಭಾಗದ ಬಹುವರ್ಷಗಳ ನಾಗರೀಕರ ಆಶಯವಾಗಿದೆ. ಹೊಸ ತಾಲೂಕು ರಚನೆ ಆಗುವುದರಿಂದ ಆಡಳಿತಾತ್ಮಕವಾಗಿ ಹಾಗೂ ಅಭಿವೃದ್ಧಿ ದೃಷ್ಟಿಯಿಂದ ಅನುಕೂಲವಾಗಲಿದೆ. ಈಗಾಗಲೇ ಗೋಕಾಕ ತಾಲೂಕಿನಿಂದ ಬೇರ್ಪಟ್ಟು ಮೂಡಲಗಿಯನ್ನು ಹೊಸ ತಾಲೂಕು ಕೇಂದ್ರವನ್ನಾಗಿ ಮಾಡಲಾಗಿದೆ. ಇದರ ಜೊತೆಗೆ ಕೌಜಲಗಿಯನ್ನು ನೂತನ ತಾಲೂಕು ಕೇಂದ್ರವಾಗಲಿಕ್ಕೆ ಎಲ್ಲ ರೀತಿಯ ಸಹಕಾರವನ್ನು ನೀಡುತ್ತೇನೆ. ಎಲ್ಲರೂ ಸೇರಿ ಕೌಜಲಗಿಯನ್ನು ತಾಲೂಕಾ ರಚಿಸಲಿಕ್ಕೆ ಪ್ರಯತ್ನ ಮಾಡೋಣ. ನಾನು ಕೂಡಾ ನಿಟ್ಟಿನಲ್ಲಿ ಅತ್ಯಂತ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದು ಹೇಳಿದರು.

ಬೆಳಗಾವಿ ಜಿಲ್ಲೆಯು ದೊಡ್ಡ ಜಿಲ್ಲೆಯಾಗಿದೆ ಹೊಸ ತಾಲೂಕುಗಳನ್ನು ರಚಿಸಿದರೇ ಜನರಿಗೆ ಉತ್ತಮ ಆಡಳಿತ ನೀಡಲು ಸಾಧ್ಯವಾಗುತ್ತದೆ. ಬಹುವರ್ಷಗಳ ಬೇಡಿಕೆಯಾಗಿರುವ ಕೌಜಲಗಿ ಗ್ರಾಮವನ್ನು ತಾಲೂಕು ಕೇಂದ್ರವನ್ನಾಗಿ ರಚಿಸುವಂತೆ ನಾನು ಕೂಡಾ ಮುಖ್ಯಮಂತ್ರಿಗಳ ಮೇಲೆ ಒತ್ತಡ ಹೇರುತ್ತೇನೆ. ಕೌಜಲಗಿ ಹಾಗೂ ಸುತ್ತಮುತ್ತಲಿನ ಹಳ್ಳಿಗಳ ನಾಗರೀಕರಿಗೆ ನ್ಯಾಯ ದೊರಕಿಸಿಕೊಡುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಮೂಡಲಗಿ ಜನತೆಗೆ ನೀಡಿದ ಆಶ್ವಾಸನೆಯನ್ನು ಈಡೇರಿಸಿ, ಮೂಡಲಗಿಯನ್ನು ಹೊಸ ತಾಲೂಕುನ್ನು ಮಾಡಿಕೊಂಡು ಬಂದಿದ್ದಾಗಿ ಹೇಳಿದ ಅವರು, ಕೌಜಲಗಿಯನ್ನು ಸಹ ತಾಲೂಕುವನ್ನಾಗಿ ಮಾಡಲು ಮುಖ್ಯಮಂತ್ರಿಗಳ ಬಳಿಗೆ ನಿಯೋಗವೊಂದನ್ನು ಕರೆದೊಯ್ಯಲಾಗುವುದು ಎಂದು ತಿಳಿಸಿದರು.

ಕೌಜಲಗಿ ಗ್ರಾಮಸ್ಥರ ಬೇಡಿಕೆ-ಯಾಗಿದ್ದ ಕಲ್ಮಡ್ಡಿ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಕಾಮಗಾರಿ ಸಂಪೂರ್ಣ ಮುಗಿದಿದ್ದು. ಫೆಬ್ರುವರಿ ತಿಂಗಳಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಂದ ಉದ್ಘಾಟನೆಗೊಳ್ಳಲಿದೆ ಎಂದು ಹೇಳಿದರು.

ಮನ್ನಿಕೇರಿಯ ವಿಜಯಸಿದ್ದೇಶ್ವರ ಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಮುಖಂಡರಾದ ಎಮ್.ಆರ್.ಭೋವಿ, ರಾಜೇಂದ್ರ ಸಣ್ಣಕ್ಕಿ, ಬಸನಗೌಡ ಪಾಟೀಲ, ಗೋವಿಂದ ಕೊಪ್ಪದ, ರಾಮಣ್ಣ ಮಹಾರಡ್ಡಿ, ಪರಮೇಶ್ವರ ಹೊಸಮನಿ, ಶಿವಾನಂದ ಲೋಕನ್ನವರ ಅವರು ಮಾತನಾಡಿ ಕೌಜಲಗಿಯನ್ನು ಹೊಸ ತಾಲೂಕು ಕೇಂದ್ರವನ್ನಾಗಿ ಪರಿವರ್ತಿಸುವಂತೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರಿಗೆ ಮನವಿ ಮಾಡಿಕೊಂಡರು. ಕೌಜಲಗಿ ತಾಲೂಕು ರಚನೆಯಾದರೇ ಸುತ್ತಮುತ್ತಲಿನ ನಾಗರೀಕರಿಗೆ ಆಡಳಿತಾತ್ಮಕವಾಗಿ ಅನುಕೂಲವಾಗಲಿದೆ. ಈ ಹಿಂದಿನ ಎಲ್ಲ ಆಯೋಗಗಳು ಕೌಜಲಗಿ ತಾಲೂಕು ರಚನೆಗೆ ಸರ್ಕಾರಗಳಿಗೆ ಶಿಫಾರಸ್ಸು ಮಾಡಿವೆ. ಸುಮಾರು 3 ದಶಕಗಳಿಂದ ಸತತವಾಗಿ ನಾವುಗಳು ಹೋರಾಟವನ್ನು ಮಾಡಿಕೊಂಡು ಬರುತ್ತಿದ್ದೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಅಶೋಕ ನಾಯಿಕ, ವಿಠ್ಠಲ ಸವದತ್ತಿ, ಸುಭಾಸ ವಂಟಗೋಡಿ, ಕರೆಪ್ಪ ಬಿಸಗುಪ್ಪಿ, ರವಿ ಪರುಶೆಟ್ಟಿ, ಈರಣ್ಣ ಜಾಲಿಬೇರಿ, ಬಾಳಪ್ಪ ಗೌಡರ, ಸುಭಾಶ ಕೌಜಲಗಿ, ಮಹೇಶ ಪಟ್ಟಣಶೆಟ್ಟಿ, ಮಹಾಂತೇಶ ಶಿವನಮಾರಿ, ಮುದಕಪ್ಪ ಗೋಡಿ, ಅಡಿವೆಪ್ಪ ಅಳಗೋಡಿ, ಪ್ರಕಾಶ ಹೆಗಡೆ, ನೀಲಪ್ಪ ಕಿವಟಿ, ಹಾಸಿಮ್‌ಸಾಬ ನಗಾರ್ಜಿ, ಪ್ರಕಾಶ ಕೋಟಿನತೋಟ, ಪ್ರೊ.ರಾಜು ಕಂಬಾರ, ಸಿದ್ದಪ್ಪ ಡೋಣಿ, ಅಶೋಕ ಉದ್ದಪ್ಪನ್ನವರ, ಶಾಂತಪ್ಪ ಹಿರೇಮೇತ್ರಿ, ಜಿ.ಎಸ್.ಲೋಕನ್ನವರ, ಅಲ್ಲಾಬಕ್ಷ ಹುನ್ನೂರ, ಅಶೋಕ ಶಿವಾಪೂರ ಸೇರಿದಂತೆ ಕೌಜಲಗಿ ಹಾಗೂ ಸುತ್ತಲಿನ ಗ್ರಾಮಸ್ಥರು ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089